ಶುಕ್ರವಾರ 07.11.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 93
Digital Varthe Kannada Daily
Volume 01 - Issue 93
Friday 07.11.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಕನ್ನಡ ದಿನಪತ್ರಿಕೆ

DIGITAL VARTHE
digitalvarthe@gmail.com
www.digitalvarthe.com

## ಅಪ್ರಾಪ್ತೆ ತಂಗಿಗೆ ಮಗು ಕರುಣಿಸಿ ಜೈಲುಪಾಲಾದ ಭೂಪ

**ಕೊಪ್ಪಳ** :ನಿನ್ನನ್ನು ಮದುವೆ ಆಗುತ್ತೇನೆ ಎಂದು ಪುಸಲಾಯಿಸಿ ಸ್ವಂತ ಅಣ್ಣನೇ ಅಪ್ರಾಪ್ತೆ ತಂಗಿ ಜೊತೆ ದೈಹಿಕ ಸಂಪರ್ಕ ಬೆಳೆಸಿ ಮಗು ಕರುಣಿಸಿರುವ ಆಘಾತಕಾರಿ ಘಟನೆ ಕೊಪ್ಪಳ ಗ್ರಾಮೀಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಗರ್ಭವತಿಯಾಗಿದ್ದ ಬಾಲಕಿ ವಾರದ ಹಿಂದೆ ಮಗುವಿಗೆ ಜನ್ಮ ನೀಡಿದ್ದು, 21 ವರ್ಷದ ಆರೋಪಿ ಅಣ್ಣನ ವಿರುದ್ಧ ಬಾಲಕಿ ದೂರಿನನ್ವಯ ಪೋಕ್ಸೋ ಕೇಸ್ ದಾಖಲಾಗಿದೆ. ಸದ್ಯ ಆರೋಪಿಯನ್ನ ಪೊಲೀಸರು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

**ಘಟನೆ ಏನು?**

ಮನೆಯಲ್ಲಿ ಯಾರೂ ಇಲ್ಲದ ಸಂದರ್ಭ ಆರೋಪಿ ಅಣ್ಣ ತನ್ನ ಅಪ್ರಾಪ್ತೆ ತಂಗಿ ಬಳಿ ತಾನು ನಿನ್ನನ್ನು ಮದುವೆ ಆಗುವುದಾಗಿ ಹೇಳಿದ್ದ. ನಿನ್ನನ್ನು ಯಾವತ್ತೂ ಕೈಬಿಡಲ್ಲ, ಚೆನ್ನಾಗಿ ನೋಡಿಕೊಳ್ಳುತ್ತೇನೆ. ಯಾರೂ ನಿನಗೆ ಏನು ಹೇಳದ ರೀತಿ ಕಾವಲಾಗಿ ಇರುತ್ತೇನೆ ಎಂದೆಲ್ಲ ಪುಸಲಾಯಿಸಿದ್ದ. ಈ ವೇಳೆ ಸಂತ್ರಸ್ತೆ ಇದನ್ನು ವಿರೋಧಿಸಿದ್ದು ಸಮಾಜ ಈ ರೀತಿಯ ಸಂಬಂಧವನ್ನು ಒಪ್ಪಲ್ಲ ಎಂದಿದ್ದಳು.

ಹೀಗಿದ್ದರೂ ಆಕೆಯ ಬೆನ್ನು ಬಿದ್ದಿದ್ದ ಆತ ಮನೆಯಲ್ಲಿ ಯಾರು ಇಲ್ಲದೆ ಇರುವಾಗ ತಂಗಿಯ ಜೊತೆ ದೈಹಿಕ ಸಂಬಂಧ ಬೆಳೆಸಿದ್ದ. ಫೆಬ್ರವರಿಯಿಂದ ಇವರ ನಡುವೆ ಈ ರೀತಿ ಸಂಬಂಧ ನಡೆದುಕೊಂಡು ಬಂದಿದ್ದು, ವಿಷಯವನ್ನು ಮನೆಯವರಿಗೆ ತಿಳಿಸಲು ಸಂತ್ರಸ್ತೆ ಯತ್ನಿಸಿದ್ದಳು. ಆದರೆ ಈ ವೇಳೆ ವಿಷಯ ಮನೆಯವರಿಗೆ ಹೇಳಿದರೆ ತಾನು ಆತ್ಮಹತ್ಯೆ ಮಾಡಿಕೊಳ್ಳುತ್ತೇನೆ ಎಂದು ಆರೋಪಿ ಬೆದರಿಸಿದ್ದ ಎನ್ನಲಾಗಿದೆ. ಈ ನಡುವೆ ಅಕ್ಟೋಬರ್ 26ರ ಬೆಳಿಗ್ಗೆ ಮನೆ ಕೆಲಸ ಮಾಡುವಾಗ ಸಂತ್ರಸ್ತೆ ಜಾರಿ ಬಿದ್ದಿದ್ದು, ಘಟನೆಯಲ್ಲಿ ಸೊಂಟಕ್ಕೆ ಏಟು ಬಿದ್ದಿತ್ತು.

ಹೀಗಾಗಿ ಊರಿನ ಖಾಸಗಿ ಆಸ್ಪತ್ರೆಗೆ ಆರೋಪಿಯೇ ಆಕೆಯನ್ನ ಕರೆದೊಯ್ದಿದ್ದು, ಈ ವೇಳೆ ವೈದ್ಯರು ಬೆನ್ನಿಗೆ ಪೆಟ್ಟಾಗಿದೆ. ಶೀಘ್ರವಾಗಿ ಸ್ಕ್ಯಾನಿಂಗ್ ಮಾಡಿಸುವಂತೆ ಸೂಚಿಸಿದ್ದರು. ಬಳಿಕ ಅಕ್ಟೋಬರ್ 30ರಂದು ಕೊಪ್ಪಳ ಜಿಲ್ಲಾಸ್ಪತ್ರೆಗೆ ಸಂತ್ರಸ್ತೆಯನ್ನು ಕರೆದುಕೊಂಡು ಬರಲಾಗಿದ್ದು, ಈ ವೇಳೆ ಆಕೆಯ ಹೊಟ್ಟೆಯಲ್ಲಿ ಮಗು ಇರುವ ವಿಷಯ ಬೆಳಕಿಗೆ ಬಂದಿದೆ. ಅಲ್ಲಿಯವರೆಗೆ ಗರ್ಭಿಣಿ ಎಂಬ ವಿಷಯ ತನಗೇ ಗೊತ್ತಿಲ್ಲ ಎಂದು ಸಂತ್ರಸ್ತೆ ತಿಳಿಸಿದ್ದು, ಅದೇ ದಿನ ರಾತ್ರಿ ಗಂಡು ಮಗುವಿಗೆ ಆಕೆ ಜನ್ಮ ನೀಡಿದ್ದಾಳೆ.

## ಪತ್ನಿ ಕಾಣೆಯಾಗಿದ್ದಕ್ಕೆ ಮಗಳನ್ನು ಕೊಂದು, ತಂದೆ ಆತ್ಮಹತ್ಯೆ

**ಕೋಲಾರ:** ಕೋಲಾರ ಜಿಲ್ಲೆಯ ಮುಳಬಾಗಿಲು ತಾಲೂಕಿನ ಮುಡಿಯನೂರು ಗ್ರಾಮದಲ್ಲಿ ನಡೆದ ಹೃದಯ ವಿದ್ರಾವಕ ಘಟನೆಯಿಂದ ಸ್ಥಳೀಯರು ಮತ್ತು ಅಧಿಕಾರಿಗಳು ದಿಗ್ಭ್ರಾಂತರಾಗಿದ್ದಾರೆ. ಪತ್ನಿ ಕಾಣೆಯಾಗಿದ್ದಕ್ಕೆ ಮನನೊಂದ ತಂದೆ ತನ್ ಐದು ವರ್ಷದ ಮಗಳನ್ನು ಕೊಂದು, ನಂತರ ಆತ್ಮಹತ್ಯೆ ಮಾಡಿಕೊಂಡಿದ್ದಾನೆ.

ಘಟನೆಯಲ್ಲಿ ಮರಣ ಹೊಂದಿದವರು ಮುಡಿಯನೂರು ಗ್ರಾಮದ ಲೋಕೇಶ್ (37) ಮತ್ತು ಅವರ ಮಗಳು ನಿಹಾರಿಕಾ (5). ಲೋಕೇಶ್ ಅವರು ತಮ್ಮ ಮಗಳ ನಿಹಾರಿಕಾಳನ್ನು ಉಸಿರು ಗಟ್ಟಿಸಿ ಕೊಂದಿರುವ ಶಂಕೆ ಇದೆ. ಮಗಳ ದೇಹವನ್ನು ಕಾರಿನಲ್ಲಿಟ್ಟು, ಬಳಿಕ ಅದೇ ಸ್ಥಳದಲ್ಲಿದ್ದ ಮರಕ್ಕೆ ನೇಣು ಬಿಗಿದುಕೊಂಡು ಲೋಕೇಶ್ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಮುಡಿಯನೂರು ಸಮೀಪದ ಪಿ.ಯು ಕಾಲೇಜು ಎದುರು ನಡೆಯಿದೆ. ಸ್ಥಳೀಯರು ಮೃತ ದೇಹಗಳನ್ನು ನೋಡಿದ ಕೂಡಲೇ ಪೊಲೀಸರಿಗೆ ಮಾಹಿತಿ ನೀಡಿದರು. ಪೊಲೀಸರು ಸ್ಥಲಕ್ಕೆ ಭೇಟಿ ನೀಡಿ ಪರಿಶಿಲನೆ ನಡೆಸಿದ್ದಾರೆ. ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿರುವ ವಿವರಗಳ ಪ್ರಕಾರ, ಲೋಕೇಶ್ ಅವರ ಪತ್ನಿ ನವ್ಯಶ್ರಿ ಕೆಲವು ದಿನಗಳಿಂದ ಮನೆಯಿಂದ ಕಾಣೆಯಾಗಿದ್ದರು. ಪತ್ನಿ ಕಾಣೆಯಾಗಿದ್ದಕ್ಕೆ ಮನನೊಂದ ಲೋಕೇಶ್ ಮಾನಸಿಕವಾಗಿ ನೊಂದಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.ಮೃತದೇಹಗಳನ್ನು ಪೋಸ್ಟ್ ಮಾರ್ಟಮ್ ಪರೀಕ್ಷೆಗಾಗಿ ಕೋಲಾರದ ಆಸ್ಪತ್ರೆಗೆ ರವಾನೆ ಮಾಡಲಾಗಿದೆ.

## ಕ್ರಿಕೆಟ್ ಆಡುವಾಗ ಕುಸಿದುಬಿದ್ದು ಎಲ್‌ಐಸಿ ಅಧಿಕಾರಿ ಸಾವು



**ಝೂನ್ಸಿ (ಉತ್ತರ ಪ್ರದೇಶ):** ಉತ್ತರ ಪ್ರದೇಶದ ಝೂನ್ಸಿ ನಗರದಲ್ಲಿ, ಎಲ್‌ಐಸಿ ಅಧಿಕಾರಿಯೊಬ್ಬರು ಕ್ರಿಕೆಟ್ ಆಡುತ್ತಿದ್ದಾಗ ಕುಸಿದು ಬಿದ್ದು ಮೃತಪಟ್ಟಿರುವ ಘಟನೆ ನಡೆದಿದೆ. 30 ವರ್ಷದ ರವೀಂದ್ರ ಕುಮಾರ್ ಅಹಿರ್ವಾರ್ ಮೃತ ದುರ್ದೈವಿ.

ಬುಧವಾರ ಬೆಳಿಗ್ಗೆ ಕಾರ್ತಿಕ್ ಪೂರ್ಣಿಮೆಯ ಪ್ರಯುಕ್ತ ಕಚೇರಿಗೆ ರಜೆ ಇತ್ತು. ಆದ್ದರಿಂದ ರವೀಂದ್ರ ತಮ್ಮ ಸ್ನೇಹಿತರೊಂದಿಗೆ ಸಿದ್ದೇಶ್ವರ ಪ್ರದೇಶದ ಜಿಐಸಿ ಮೈದಾನಕ್ಕೆ ಕ್ರಿಕೆಟ್ ಆಡಲು ತೆರಳಿದ್ದರು. ಆಟದ ಸಮಯದಲ್ಲಿ ಅವರು ಬೌಲಿಂಗ್ ಮಾಡುತ್ತಿದ್ದಾಗ ನಿಲ್ಲಿಸಿ ನೀರು ಕುಡಿದರು. ನೀರು ಕುಡಿದ ಕೆಲವೇ ಕ್ಷಣಗಳಲ್ಲಿ ಅವರು ಅಸ್ವಸ್ಥಗೊಂಡು ವಾಂತಿ ಮಾಡಿದರು ನಂತರ ತಕ್ಷಣ ನೆಲಕ್ಕೆ ಬಿದ್ದದ್ದಾರೆ.

ಆಘಾತಗೊಂಡ ಸ್ನೇಹಿತರು ತಕ್ಷಣ ಆಂಬ್ಯುಲೆನ್ಸ್‌ಗೆ ಕರೆಮಾಡಿ ಆಸ್ಪತ್ರೆಗೆ ಕರೆದೊಯ್ದರು. ಆದರೆ ವೈದ್ಯರು ತಪಾಸಣೆ ನಡೆಸಿದಾಗ ರವೀಂದ್ರ ಈಗಾಗಲೇ ಮೃತಪಟ್ಟಿದ್ದಾರೆ ಎಂದು ಹೇಳಿದ್ದಾರೆ. ಈ ಘಟನೆ ನಡೆದ ಸ್ಥಳವು ಝೂನ್ಸಿಯ ಸಿಪಿ ಬಜಾರ್ ಪೊಲೀಸ್ ಠಾಣೆ ವ್ಯಾಪ್ತಿಯ ಸಿದ್ದೇಶ್ವರ ಪ್ರದೇಶದಲ್ಲಿರುವ ಜಿಐಸಿ ಮೈದಾನದಲ್ಲಿ ನಡೆದಿದೆ. ಘಟನೆ ಕುರಿತು ಮಾಹಿತಿ ಪಡೆದ ಬಳಿಕ ಸ್ಥಳೀಯ ಪೊಲೀಸರು ದೌಡಾಯಿಸಿ ಪರಿಶೀಲನೆ ನಡೆಸಿದ್ದಾರೆ. ಸಾವಿನ ನಿಖರ ಕಾರಣ ಪತ್ತೆಹಚ್ಚಲು ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ.

ಪ್ರಾಥಮಿಕವಾಗಿ ಹೃದಯಾಘಾತ ಕಾರಣ ಇರಬಹುದು ಎಂಬ ಶಂಕೆ ವ್ಯಕ್ತವಾಗಿದೆ.

ರವೀಂದ್ರ ಕುಮಾರ್ ಅಹಿರ್ವಾರ್ ಅವರು ಝೂನ್ಸಿಯ ಸಿಪಿ ಬಜಾರ್‌ನ ನಿವಾಸಿಯಾಗಿದ್ದು, ಎರಡು ವರ್ಷಗಳ ಹಿಂದೆ ಭಾರತೀಯ ಜೀವ ವಿಮಾ ನಿಗಮದಲ್ಲಿ (ಎಲ್‌ಐಸಿ) ಅಭಿವೃದ್ಧಿ ಅಧಿಕಾರಿ ಹುದ್ದೆಗೆ ನೇಮಕಗೊಂಡಿದ್ದರು. ಅವರ ತಂದೆ ಸ್ವಾಮಿ ಪ್ರಸಾದ್ ಅಹಿರ್ವಾರ್ ಕೆಲಸಗಾರರಾಗಿದ್ದು, ಈ ದಂಪತಿಗಳಿಗೆ ಮೂವರು ಗಂಡು ಮಕ್ಕಳು ಇದ್ದಾರೆ. ರವೀಂದ್ರ ಎರಡನೇ ಪುತ್ರ.

ಹಿರಿಯ ಸಹೋದರ ವಿಕಾಸ್ ಅಹಮದಾಬಾದ್‌ನ ಮಾರುತಿಯಲ್ಲಿ ಕೆಲಸ ಮಾಡುತ್ತಿದ್ದರೆ, ಕಿರಿಯ ಸಹೋದರ ಅರವಿಂದ್ ಸ್ಪರ್ಧಾತ್ಮಕ ಪರೀಕ್ಷೆಗಳಿಗಾಗಿ ತಯಾರಿ ನಡೆಸುತ್ತಿದ್ದಾರೆ.

ಕುಟುಂಬದವರು ಹೇಳುವಂತೆ, ರವೀಂದ್ರ ಶಾರೀರಿಕವಾಗಿ ತುಂಬಾ ಆರೋಗ್ಯವಾಗಿದ್ದರು. ಮೂರು ತಿಂಗಳ ಹಿಂದೆ ಅವರು ಸಂಪೂರ್ಣ ವೈದ್ಯಕೀಯ ತಪಾಸಣೆಗೊಳಗಾದಾಗ ಯಾವುದೇ ಆರೋಗ್ಯ ಸಮಸ್ಯೆ ಪತ್ತೆಯಾಗಿರಲಿಲ್ಲ. "ಅವರು ಕ್ರೀಡೆಗಳನ್ನು ತುಂಬಾ ಇಷ್ಟಪಡುತ್ತಿದ್ದರು. ಪ್ರತೀ ವಾರದಂತೆಯೇ ಬುಧವಾರವೂ ಮೈದಾನಕ್ಕೆ ತೆರಳಿದ್ದರು. ಆದರೆ ಇಂತಹ ದುರಂತ ಸಂಭವಿಸುತ್ತದೆ ಎಂದು ಯಾರಿಗೂ ಊಹಿಸಲಿಲ್ಲ," ಎಂದು ಕುಟುಂಬದವರು ಹೇಳಿದ್ದಾರೆ.


## ಸಚಿವರ ಮನೆಯಲ್ಲಿ ಕಳ್ಳತನ ಕೋಟ್ಯಂತರ ಮೌಲ್ಯದ ಚಿನ್ನ, ಬೆಳ್ಳಿ, ಹಣ ವಶ



ಚಿಕ್ಕಮಗಳೂರು: ಮಲೆನಾಡ ಗಾಂಧಿ ಎಂದೇ ಖ್ಯಾತಿಯಾಗಿರುವ ದಿ.ಹೆಚ್.ಜಿ. ಗೋವಿಂದೇಗೌಡರ ಪುತ್ರ ವೆಂಕಟೇಶ್ ಅವರ ಮನೆಯಲ್ಲಿ ಕಳ್ಳತನ ಮಾಡಿದ್ದ ಆರೋಪಿಗಳನ್ನು ಕೊಪ್ಪ ಪೊಲೀಸರು ಬಂಧಿಸಿ,ಕೋಟ್ಯಂತರ ರೂ. ಮೌಲ್ಯದ ಚಿನ್ನಾಭರಣ) ಮತ್ತು ನಗದನ್ನು ವಶಕ್ಕೆ ಪಡೆದಿದ್ದಾರೆ.

ಆ.21ರಂದು ಕೊಪ್ಪ ಪಟ್ಟಣದ ಹರಂದೂರು ಗ್ರಾಮದಲ್ಲಿರುವ ವೆಂಕಟೇಶ್ ಅವರ ಮನೆಯಲ್ಲಿ 15 ದಿನಗಳ ಹಿಂದಷ್ಟೆ ಕೆಲಸಕ್ಕೆ ಸೇರಿದ್ದ ನೇಪಾಳ ಮೂಲದ ದಂಪತಿ ಕಳ್ಳತನ ಮಾಡಿ ಎಸ್ಕೇಪ್ ಆಗಿದ್ದರು. ಕೊಪ್ಪ ಪೊಲೀಸ್ ಠಾಣೆಯಲ್ಲಿ ಈ ಸಂಬಂಧ ಪ್ರಕರಣ ದಾಖಲಾಗಿತ್ತು. ಕಳ್ಳತನ ಮಾಡಿದ ನೇಪಾಳ ಮೂಲದ ಖದೀಮರ ಗ್ಯಾಂಗ್ ಪರಾರಿಯಾಗುತ್ತಿದ್ದ ಬಗ್ಗೆ ಖಚಿತ ಮಾಹಿತಿ ಪಡೆದ ಚಿಕ್ಕಮಗಳೂರು ಪೊಲೀಸರು, ಪ್ರಕರಣ ದಾಖಲಾದ 48 ಗಂಟೆಗಳಲ್ಲಿ ಮಹಾರಾಷ್ಟ್ರ ಪೊಲೀಸರ ನೆರವಿನೊಂದಿಗೆ ಮೂವರು ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದರು. ಅಲ್ಲದೇ ಕೃತ್ಯಕ್ಕೆ ಬಳಸಿದ್ದ ಎರಡು ವಾಹನಗಳನ್ನು ವಶಕ್ಕೆ ಪಡೆದಿದ್ದರು ವಶಪಡಿಸಿಕೊಂಡ ಈ ಎರಡು ವಾಹನಗಳಲ್ಲಿ ಕೂಲಂಕುಷವಾಗಿ ಶೋಧ ಕಾರ್ಯ ನಡೆಸಿದಾಗ, ಮಹತ್ವದ ಸ್ವತ್ತುಗಳು ಪತ್ತೆಯಾಗಿವೆ. 595.5 ಗ್ರಾಂ ತೂಕದ ಚಿನ್ನಾಭರಣ, 589 ಗ್ರಾಂ ತೂಕದ ಬೆಳ್ಳಿ ವಸ್ತುಗಳು ಹಾಗೂ 3,41,150 ರೂ. ನಗದು ಪತ್ತೆಯಾಗಿದೆ.

## ಚರಂಡಿಯಲ್ಲಿ ಮಹಿಳೆಯ ತಲೆಯಿಲ್ಲದ ಬೆತ್ತಲೆ ಶವ ಪತ್ತೆ



**ನೊಯ್ಡಾ:** ಭಾರತದಲ್ಲಿ ಇತ್ತೀಚೆಗೆ ಅಪರಾಧ ಪ್ರಕರಣಗಳು ಹೆಚ್ಚಾಗಿ ಬೆಳಕಿಗೆ ಬರುತ್ತಿವೆ. ಅದರಲ್ಲೂ ಅಕ್ರಮ ಸಂಬಂಧದಿಂದ ಕೊಲೆ ಪ್ರಕರಣಗಳು, ಮಹಿಳೆಯರ ಮೇಲಿನ ಅತ್ಯಾಚಾರ ಪ್ರಕರಣಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿವೆ. ಇದೀಗ ಉತ್ತರ ಪ್ರದೇಶದ ನೊಯ್ಡಾದಲ್ಲಿ ನಡೆದಿರುವ ಕೊಲೆ ಪ್ರಕರಣ ಎಷ್ಟು ಅಮಾನವೀಯವಾಗಿದೆ ಎಂದರೆ ಈ ಘಟನೆ ಇಡೀ ದೇಶವನ್ನೇ ಬೆಚ್ಚಿಬೀಳಿಸಿದೆ. ಮಹಿಳೆಯ ಶವವೊಂದು ಪತ್ತೆಯಾಗಿದ್ದು, ಆ ದೇಹದ ಮೇಲೆ ಒಂದು ತುಂಡು ಬಟ್ಟೆಯೂ ಇಲ್ಲ, ರುಂಡವೂ ಇಲ್ಲ!

ನೊಯ್ಡಾ ಸೆಕ್ಟರ್ 108ರ ಚರಂಡಿಯಲ್ಲಿ ಅಂಗೈಗಳನ್ನು ಕತ್ತರಿಸಿರುವ, ತಲೆಯನ್ನು ಕತ್ತರಿಸಿರುವ ಮಹಿಳೆಯ ಬೆತ್ತಲೆ ದೇಹವು ಪತ್ತೆಯಾಗಿದೆ. ಮೃತ ಮಹಿಳೆ ಯಾರು, ಆಕೆಯ ವಯಸ್ಸೇನು, ಆಕೆಯನ್ನು ಕೊಲೆ ಮಾಡಿದ್ದು ಯಾರು? ಎಂಬುದರ ಬಗ್ಗೆ ತಿಳಿಯಲು ಪೊಲೀಸರು ಪ್ರಯತ್ನಿಸುತ್ತಿದ್ದಾರೆ. ನೊಯ್ಡಾದ ಐಷಾರಾಮಿ ಪ್ರದೇಶದ ಚರಂಡಿಯಲ್ಲಿ ತಲೆಯಿಲ್ಲದ ಮತ್ತು ಬೆತ್ತಲೆ ಶವ ಪತ್ತೆಯಾಗಿದೆ ಎಂದು ಪೊಲೀಸರು ಖಚಿತಪಡಿಸಿದ್ದಾರೆ. ತಲೆ ಮತ್ತು ಅಂಗೈಗಳನ್ನು ಕತ್ತರಿಸಲ್ಪಟ್ಟಿರುವ ಶವ ಇಂದು ಬೆಳಿಗ್ಗೆ ಚರಂಡಿಯಲ್ಲಿ ತೇಲುತ್ತಿರುವುದು ಕಂಡುಬಂದಿದೆ. ತಕ್ಷಣ ಸ್ಥಳೀಯರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

ಆ ಮಹಿಳೆಯ ಗುರುತನ್ನು ತಕ್ಷಣ ಕಂಡುಹಿಡಿಯಲು ಸಾಧ್ಯವಾಗಿಲ್ಲ. ಮಹಿಳೆಯನ್ನು ಕೊಲೆ ಮಾಡಿ, ಬೇರೆ ಪ್ರದೇಶದಲ್ಲಿ ಆಕೆಯ ದೇಹವನ್ನು ತುಂಡುಗಳಾಗಿ ಕತ್ತರಿಸಿ, ಆಕೆಯ ರುಂಡ ಕತ್ತರಿಸಿದ ದೇಹವನ್ನು ನೊಯ್ಡಾ ಸೆಕ್ಟರ್ 108ರಲ್ಲಿ ಎಸೆದಿರಬಹುದು ಎಂದು ಪೊಲೀಸರು ಅನುಮಾನ ವ್ಯಕ್ತಪಡಿಸಿದ್ದಾರೆ. ಈ ಬಗ್ಗೆ ಮಾಹಿತಿ ಪಡೆದ ನಂತರ, ಸ್ಥಳಕ್ಕೆ ಧಾವಿಸಿದ ಪೊಲೀಸ್ ತಂಡವು ಆ ಶವವನ್ನು ಚರಂಡಿಯನ್ನು ಹೊರಗೆ ತೆಗೆದು, ಶಿರಚ್ಛೇದಿತ ದೇಹವನ್ನು ಶವಪರೀಕ್ಷೆಗಾಗಿ ಆಸ್ಪತ್ರೆಗೆ ಕಳುಹಿಸಿದೆ. ಆ ಮಹಿಳೆಯನ್ನು ಗುರುತಿಸಲು ಪ್ರಯತ್ನಗಳು ನಡೆಯುತ್ತಿವೆ. ಇತರ ಕಾನೂನು ಕ್ರಮಗಳನ್ನು ಸಹ ತೆಗೆದುಕೊಳ್ಳಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಈ ವಿಷಯದ ಬಗ್ಗೆ ತನಿಖೆ ನಡೆಸಲು ತಂಡವನ್ನು ರಚಿಸಲಾಗಿದೆ. ಪ್ರಕರಣದ ಸುಳಿವುಗಳಿಗಾಗಿ ಹತ್ತಿರದ ಸಿಸಿಟಿವಿ ದೃಶ್ಯಾವಳಿಗಳನ್ನು ಸಹ ಸ್ಕ್ಯಾನ್ ಮಾಡಲಾಗುತ್ತದೆ ಎಂದು ಪೊಲೀಸರು ತಿಳಿಸಿದ್ದಾರೆ.

**ನವೆಂಬರ್ 27 ರಂದು ನಿಮ್ಮ ಡಿಜಿಟಲ್ ವಾರ್ತೆ ದಿನಪತ್ರಿಕೆ**

**ಹಾಗೂ ಡಿಜಿಟಲ್ ವಾಹಿನಿ ನೂತನ ಕಚೇರಿ**

**ಉದ್ಘಾಟನೆಗೊಳ್ಳಲಿದ್ದು , ಸರ್ವರಿಗೂ ಆತ್ಮೀಯ ಆಮಂತ್ರಣ**

## ಸಚಿವ ಸ್ಥಾನ ಬೇಕು ಅಂತ ನಾನು ದೆಹಲಿಗೆ ಹೋಗೋದಿಲ್ಲ ರಾಮಲಿಂಗಾರೆಡ್ಡಿ



**ಬೆಂಗಳೂರು:** ನಾನು ಸಚಿವ ಸ್ಥಾನ ಬೇಕು ಅಂತ ಹಿಂದೆಯೂ ದೆಹಲಿಗೆ ಹೋಗಿಲ್ಲ. ಮುಂದೆ ಯೂ ಹೋಗೋ ದಿಲ್ಲ ಅಂತ ಸಚಿವ ರಾಮಲಿಂಗಾ ರೆಡ್ಡಿ ತಿಳಿಸಿದ್ದಾರೆ.

ಸಚಿವ ಸಂಪುಟ ವಿಸ್ತರಣೆ, ಡಿಸಿಎಂ ಡಿಕೆಶಿವಕುಮಾರ್ ದೆಹಲಿ ಪ್ರವಾಸ ಮತ್ತು ಸಚಿವ ಆಕಾಂಕ್ಷಿಗಳು ದೆಹಲಿ ಪ್ರವಾಹ ಹೋಗ್ತಿರೋ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ನಾನು ಅಧಿಕಾರ ಬೇಕು ಅಂತ ದೆಹಲಿಗೆ ಹೋಗೊಲ್ಲ. 2 ವರ್ಷಗಳಲ್ಲಿ ದೆಹಲಿಗೆ ನಾನು ಹೋಗಿರೋದು ಎರಡನೇ ಸಾರಿ. ಇಲಾಖೆ ಕಾರ್ಯಕ್ರಮಗಳಿಗೆ. ನಾನು ಯಾವತ್ತು ಸ್ಥಾನಮಾನ ಬೇಕು ಕೊಡಿ ಅಂತ ದೆಹಲಿಗೆ ಹೋಗಿಲ್ಲ ಎಂದರು. ಇದನ್ನೂ

ನನಗೆ ಸಚಿವ ಸ್ಥಾನ ಬೇಕು ಅಂತ ಪ್ರಭಾವವನ್ನು ಬೀರೋದಿಲ್ಲ. ಅರ್ಹತೆ ಇದ್ದರೆ ಕೊಡ್ತಾರೆ ಇಲ್ಲಾ ಅಂದರೆ ಇಲ್ಲ. ದಲಿತ ಸಿಎಂ ಕೂಗು ವಿಚಾರವಾಗಿ ನಾನು ಮಾತಾಡೊಲ್ಲ ಎಂದರು. 2014 ರಿಂದ ಲೇ ವೋಟ್ ಚೋರಿ

ಬಿಜೆಪಿಯವರು (BJP) ಅಧಿಕಾರಕ್ಕೆ ಬಂದ 2014 ರಿಂದ ವೋಟ್ ಚೋರಿ ದೇಶದಲ್ಲಿ ನಡೆಯುತ್ತಿದೆ. ರಾಹುಲ್ ಗಾಂಧಿಯವರು ಮತ್ತೆ ವೋಟ್ ಚೋರಿ ಆರೋಪ ಮಾಡಿದ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ರಾಹುಲ್ ಗಾಂಧಿ ಪರ ಬ್ಯಾಟಿಂಗ್ ಮಾಡಿದ್ರು.

ಮಹಾರಾಷ್ಟ್ರ ಎಂಪಿ ಚುನಾವಣೆ ಇಂಡಿ ಕೂಟಕ್ಕೆ ಜಾಸ್ತಿ ಸ್ಥಾನ ಬಂತು. ವಿಧಾನಸಭೆ ನಾವು ಗೆಲ್ತೀವಿ ಅಂತ ಬಿಜೆಪಿ ಮಹಾರಾಷ್ಟ್ರದಲ್ಲಿ ವೋಟ್ ಚೋರಿ ಕೆಲಸ ಮಾಡಿದೆ. ಮಹಾರಾಷ್ಟ್ರ ಚುನಾವಣೆ ವೇಳೆಯೇ ಈ ವೋಟ್ ಚೋರಿ ಬಗ್ಗೆ ನಮಗೆ ಗೊತ್ತಾಯ್ತು ಅಂತ ಬಿಜೆಪಿ ವಿರುದ್ಧ ಕಿಡಿಕಾರಿದರು.

ವಂದೇ ಮಾತರಂ ಗೀತೆ ರಾಷ್ಟ್ರ ಗೀತೆ ಆಗಬೇಕಿತ್ತು ಎಂಬ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಹೇಳಿಕೆಗೆ ಪ್ರತಿಕ್ರಿಯೆ ನೀಡಿದ ಅವರು, ಬ್ರಿಟಿಷರು ದೇಶ ಬಿಟ್ಟು ಹೋದಾಗಲೇ ನಮ್ಮ ರಾಷ್ಟ್ರಗೀತೆ, ಸಂವಿಧಾನ, ಕಾನೂನು ಹೇಗೆ ಇರಬೇಕು ಅಂತ ಸ್ವಾತಂತ್ರ್ಯ ಬಂದ ಮೇಲೆ ಆಗಿನ ಪ್ರಧಾನಿಗಳು, ಮಂತ್ರಿ ಮಂಡಲ ತೀರ್ಮಾನ ಮಾಡಿ ಮಾಡಿದೆ. ಈಗ 78 ವರ್ಷ ಆದ ಮೇಲೆ ಬಿಜೆಪಿ ಅವರು ವಿರೋಧ ಮಾಡ್ತಾ ಇದ್ದಾರೆ. ಜನಗಣಮನದಲ್ಲಿ ಏನಿದೆ. ವಂದೇ ಮಾತರಂನ್ನು ಬಿಜೆಪಿಯವರು ಹಾಡ್ತಾರೋ ಇಲ್ಲವೋ ಗೊತ್ತಿಲ್ಲ. ನಮ್ಮ ಕಾಂಗ್ರೆಸ್‌ನ ಎಲ್ಲಾ ಕಾರ್ಯಕ್ರಮದಲ್ಲಿ ವಂದೇ ಮಾತರಂ ಹಾಡ್ತೀವಿ. ಬಿಜೆಪಿ ಅವರಿಗಿಂತ ವಂದೇ ಮಾತರಂ ಗೀತೆ ಮೇಲೆ ಕಾಂಗ್ರೆಸ್ ಅವರಿಗೆ ಗೌರವ ಜಾಸ್ತಿ ಇದೆ ಎಂದು ತಿರುಗೇಟು ಕೊಟ್ಟರು.

ಬಿಜೆಪಿಯವರು ನೆಹರು, ರಾಹುಲ್ ಗಾಂಧಿ, ಇಂದಿರಾಗಾಂಧಿ, ಸರ್ದಾರ್ ವಲ್ಲಭಭಾಯಿ ಪಟೇಲ್ ವಿರುದ್ಧ ಅಪ ಪ್ರಚಾರ ಮಾಡ್ತಾರೆ. ಸರ್ದಾರ್ ವಲ್ಲಭಭಾಯ್ ಪಟೇಲರೇ RSS ಬ್ಯಾನ್ ಮಾಡಿದ್ರು. ಈಗ ಚರಿತ್ರೆ ತಿರುಚೋ ಕೆಲಸ ಬಿಜೆಪಿಯವರು ಮಾಡ್ತಿದ್ದಾರೆ. ಹೀಗೆ ಚರಿತ್ರೆ ತಿರುಚೋಕೆ ವಾಟ್ಸಾಪ್ ಯುನಿವರ್ಸಿಟಿಗಳು ಕೆಲಸ ಮಾಡ್ತಿವೆ. ನಮ್ಮ ರಾಜ್ಯದಲ್ಲಿ ಇತಿಹಾಸ ತಿರುಚೋಕೆ 700 ಜನರನ್ನ ವಾಟ್ಸಾಪ್‌ನಲ್ಲಿ ಹೀಗೆ ಮಾಡೋರು ಇದ್ದಾರೆ. 78 ವರ್ಷ ಆದ ಮೇಲೆ ಕಾಗೇರಿ ಅವರು ಜನಗಣಮನ ವಿರೋಧ ಮಾಡಿದ್ದಾರೆ. ಬಿಜೆಪಿ ಅವರು ವಂದೇ ಮಾತರಂ ಅವರು ಹಾಡೋದೇ ಇಲ್ಲ ಎಂದು ಕಿಡಿಕಾರಿದರು.

## ಕರ್ತವ್ಯದಲ್ಲಿದ್ದಾಗಲೇ ಹೃದಯಾಘಾತ – ಸಾಗರ KSRTC ಡಿಪೋ ಭದ್ರತಾ ಸಿಬ್ಬಂದಿ ಸಾವು



ಶಿವಮೊಗ್ಗ: ಸಾಗರದ ಕೆಎಸ್‌ಆರ್‌ಟಿಸಿ ಡಿಪೋದ ಭದ್ರತಾ ಸಿಬ್ಬಂದಿ ಕರ್ತವ್ಯ ದಲ್ಲಿದ್ದಾಗಲೇ ಹೃದಯಾಘಾತದಿಂದ ಸಾವನ್ನಪ್ಪಿದ್ದಾರೆ.

ಮೃತರನ್ನು ಸಾಗರದ ನಿವಾಸಿ ಸಂದೀಪ್ (41) ಎಂದು ಗುರುತಿಸಲಾಗಿದೆ. ಬುಧವಾರ ರಾತ್ರಿ ಪಾಳಿಯಲ್ಲಿ ಅವರು ಕೆಲಸ ಮಾಡುತ್ತಿದ್ದರು. ಈ ವೇಳೆ ಏಕಾಏಕಿ ಅವರಿಗೆ ಎದೆ ನೋವು ಕಾಣಿಸಿಕೊಂಡಿದೆ. ತಕ್ಷಣ ಸಂದೀಪ್‌ರನ್ನು ಸಹೋದ್ಯೋಗಿಗಳು ಬಸ್ಸಿನಲ್ಲೇ ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದರು. ಆದರೆ ಅಷ್ಟರಲ್ಲೇ ಸಂದೀಪ್ ಸಾವನ್ನಪ್ಪಿದ್ದಾರೆ ಆಸ್ಪತ್ರೆಗೆ ಕರೆದುಕೊಂಡು ಬಂದ ಸಿಬ್ಬಂದಿ ಚಂದ್ರು ಮಾತನಾಡಿ, ನಾನು ಬಸ್‌ನಲ್ಲಿ ಚಾಲಕ ಕಂ ನಿರ್ವಾಹಕನಾಗಿ ಕೆಲಸ ಮಾಡುತ್ತಿದ್ದೇನೆ. ರಾತ್ರಿ ನಾನು ಬಸ್‌ನ್ನು ಡಿಪೋಗೆ ಬಿಡಲು ಬಂದಾಗ ಗೇಟ್ ಬಳಿ ಹಾರ್ನ್ ಮಾಡಿದ್ರು ಸಹ ಸಂದೀಪ್ ಅವರು ಹೊರಗೆ ಬರಲಿಲ್ಲ. ಇವರು ಬಂದು ಬಸ್ ಚೆಕ್ ಮಾಡಿದ ಮೇಲೆಯೇ ಬಸ್ ಒಳಗೆ ಬಿಡಬೇಕಿತ್ತು.

ಬಹಳ ಹೊತ್ತು ಇವರು ಬಾರದ ಕಾರಣಕ್ಕೆ ಇವರ ರೂಮ್‌ನಲ್ಲಿ ಹೋಗಿ ನೋಡಿದಾಗ ಇವರು ಕುಸಿದು ಬಿದ್ದಿದ್ದರು. ತಕ್ಷಣ ನಮ್ಮದೇ ಬಸ್‌ನಲ್ಲಿ ಸಂದೀಪ್ ಅವರನ್ನು ಕರೆದುಕೊಂಡು ಬಂದು ಆಸ್ಪತ್ರೆಗೆ ದಾಖಲಿಸಿದೆವು. ಅಷ್ಟೊತ್ತಿಗಾಗಲೇ ಸಂದೀಪ್ ತೀರಿ ಹೋಗಿದ್ದಾರೆ ಎಂದು ವೈದ್ಯರು ತಿಳಿಸಿದರು ಎಂದು ಮಾಹಿತಿ ನೀಡಿದ್ದಾರೆ.

## ಪೊಲೀಸ್ ಅಂತಾ ಬೆದರಿಸಿ ಕತ್ತು ಕೊಯ್ದು ಹತ್ಯೆ ಕೇಸ್





**ಬೆಂಗಳೂರು :** ಶ್ರೀರಾಂಪುರದಲ್ಲಿ ಯುವತಿಯ ಕತ್ತು ಕೊಯ್ದು ಹತ್ಯೆ ಮಾಡಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಆರೋಪಿಯ ಫೋನ್ ರಿಟ್ರೀವ್ ಮಾಡಿದ್ದಾರೆ. ಯಾಮಿನಿ ಬಗ್ಗೆ ಮಾಹಿತಿ ಪಡೆಯಲು ಪೊಲೀಸ್ ಎಂದು ಬೆದರಿಸಿ ಕಾಲೇಜು ವಿದ್ಯಾರ್ಥಿಗಳೊಂದಿಗೆ `ಮಿಷನ್ ಯಾಮಿನಿ ಪ್ರಿಯಾ' ಅಂತಾ ವಾಟ್ಸಪ್ ಗ್ರೂಪ್ ಮಾಡಿದ್ದಾಗಿ ತಿಳಿದುಬಂದಿದೆ.

ಪ್ರಕರಣ ಸಂಬಂಧ ಶ್ರೀರಾಂಪುರ ಪೊಲೀಸರು ತನಿಖೆ ನಡೆಸಿದಾಗ ಸ್ಫೋಟಕ ವಿಷಯಗಳು ಬೆಳಕಿಗೆ ಬಂದಿದೆ. ಆರೋಪಿ ವಿಘ್ನೇಶ್‌ನ್ನು ಅರೆಸ್ಟ್ ಮಾಡಿ, ಆತನ ಮೊಬೈಲ್‌ನ್ನು ವಶಕ್ಕೆ ಪಡೆದು ರಿಟ್ರೀವ್‌ಗೆ ಕಳುಹಿಸಲಾಗಿತ್ತು. ಸದ್ಯ ವರದಿ ಬಂದಿದೆ ಆರೋಪಿ ಈ ಹಿಂದೆ ಬಿಬಿಎಂಪಿಯಲ್ಲಿ ಮಾರ್ಷಲ್ ಆಗಿ ಕೆಲಸ ಮಾಡುತ್ತಿದ್ದ. ಈ ವೇಳೆ ಯಾಮಿನಿ ಓದುತ್ತಿದ್ದ ಕಾಲೇಜಿಗೆ ಹೋಗಿ ಅದೇ ಕಾಲೇಜಿನ ನಾಲ್ವರು ಯುವಕರಿಗೆ ಕ್ರೈಂ ಪೊಲೀಸ್ ಅಂತಾ ಪರಿಚಯ ಮಾಡಿಕೊಂಡಿದ್ದಾನೆ. ಇದೇ ವೇಳೆ `ಮಿಷನ್ ಯಾಮಿನಿ ಪ್ರಿಯಾ' ಅಂತ ವಾಟ್ಸಪ್ ಗ್ರೂಪ್ ಕ್ರಿಯೆಟ್ ಮಾಡಿದ್ದ. ಯಾಮಿನಿಯ ಸಂಪೂರ್ಣ ಚಲನವಲನಗಳನ್ನು ನಂಗೆ ಗ್ರೂಪ್‌ನಲ್ಲಿ ಅಪ್ಡೇಟ್ ಮಾಡಬೇಕು ಎಂದು ಬೆದರಿಸಿದ್ದನಂತೆ.

ಅದರಂತೆ ಯಾಮಿನಿ ಎಷ್ಟೊತ್ತಿಗೆ ಕಾಲೇಜಿಗೆ ಬರುತ್ತಿದ್ಲು, ಯಾರ ಜೊತೆಗೆ ಮಾತಾಡಿದ್ಲು, ಯಾವಾಗ ಕಾಲೇಜಿನಿಂದ ಹೊರಟ್ಲು, ಹೀಗೆ ಯುವತಿಯ ಫಿನ್ ಟು ಪಿನ್ ಮಾಹಿತಿ ಆ ಗ್ರೂಪ್‌ನಲ್ಲಿ ಬರ್ತಿತ್ತಂತೆ. ಆ ಎಲ್ಲಾ ಮೆಸೇಜ್‌ಗಳು ಮೊಬೈಲ್ ರಿಟ್ರೀವ್ ವೇಳೆ ಪತ್ತೆಯಾಗಿದೆ. ಬಲವಂತವಾಗಿ ಮಾಂಗಲ್ಯ ಕಟ್ಟಿದ್ದನಂತೆ

ಮೃತ ಯುವತಿಗೆ ಬಲವಂತವಾಗಿ ಮಾಂಗಲ್ಯ ಕೂಡ ಕಟ್ಟಿದ್ದನಂತೆ. ಈ ವಿಚಾರ ಮನೆಯಲ್ಲಿ ತಿಳಿಸಿದ್ರೆ ಕೊಲೆ ಮಾಡ್ತೇನೆ ಎಂದು ಬೆದರಿಸಿದ್ದನಂತೆ. ಇನ್ನೂ ಇಬ್ಬರು ಒಂದೇ ಏರಿಯಾದವರಾಗಿದ್ದು, ಯಾಮಿನಿ ಪೋಷಕರ ಬಳಿ ಹೆಣ್ಣು ಕೇಳಿದ್ದನಂತೆ, ಆದರೆ ಅವರು ನಿರಾಕರಿಸಿದ್ದರು. ಬಳಿಕ ಒಂದು ಸಾರಿ ಗಲಾಟೆ ಮಾಡಿದಾಗ ಆತನ ವಿರುದ್ಧ ಯಾಮಿನಿ ಪೋಷಕರು ದೂರು ಕೊಟ್ಟಿದ್ದರು ಎಂದು ತನಿಖೆ ವೇಳೆ ತಿಳಿದುಬಂದಿದೆ

**ಏನಿದು ಪ್ರಕರಣ?**

ಅ.16ರಂದು ಮಧ್ಯಾಹ್ನ ಆರೋಪಿ ವಿಘ್ನೇಶ್ ಶ್ರೀರಾಂಪುರ ರೈಲ್ವೇ ನಿಲ್ದಾಣದ ಬಳಿ ಯಾಮಿನಿಯನ್ನು ಕತ್ತು ಕೊಯ್ದು ಹತ್ಯೆ ಮಾಡಿ, ತಾನು ಬಳಸುತ್ತಿದ್ದ ಮೊಬೈಲ್ ಎಸೆದು ಎಸ್ಕೇಪ್ ಆಗಿದ್ದ. ಬಳಿಕ ಶ್ರೀರಾಂಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು

## ಹೆತ್ತಮ್ಮನನ್ನೆ ಕೊಲೆ ಮಾಡಿ ನಾಟಕವಾಡಿದ್ದ ನಿವೃತ್ತ ಸರ್ಕಾರಿ ನೌಕರ ಅರೆಸ್ಟ್





**ಹುಬ್ಬಳ್ಳಿ:** ಆ ತಾಯಿ ಇದ್ದೊಬ್ಬ ಮಗನನ್ನು ಚೆನ್ನಾಗಿ ಬೆಳಸಿದ್ದರು. ಅಕ್ಕರೆಯಿಂದ ಆರೈಕೆ ಮಾಡಿ ಸಕ್ಕರೆಯಂತ ಜೀವನ ಕಟ್ಟಿಕೊಳ್ಳಲು ಹಗಲಿರಳು ಶ್ರಮಿಸಿದ್ದರು. ಆದರೆ ಮಹಾತಾಯಿಯನ್ನೇ ಮಗ ಕೊಲೆ (KILL) ಮಾಡಿರುವಂತಹ ದಾರುಣ ಘಟನೆಯೊಂದು ನಗರದ ಬ್ರಹ್ಮಗಿರಿ ಕಾಲೋನಿಯಲ್ಲಿ ಬುಧವಾರ ನಡೆದಿದೆ. ಹುಬ್ಬಳ್ಳಿ-ಧಾರವಾಡ ಪಾಲಿಕೆಯ ನಿವೃತ್ತ ನೌಕರ ಅಶೋಕ್ ಕೊಲೆಗೈದ ಮಗ. ನಿಂಗವ್ವ ಮುಳಗುಂದ(78) ಕೊಲೆಯಾದ ತಾಯಿ. ಕೊಲೆ ಬಳಿಕ ಅಶೋಕ್ ತಾವೇ ಪೊಲೀಸ್ ಠಾಣೆಗೆ ಮಾಹಿತಿ ನೀಡಿದ್ದಾರೆ. ಆದರೆ ಅನುಮಾನ ಬಂದು ಪೊಲೀಸರು ವಿಚಾರಿಸಿದಾಗ ಅಸಲಿ ಸತ್ಯ ಗೊತ್ತಾಗಿದ್ದು , ಸದ್ಯ ಅಶೋಕ್ ಅರೆಸ್ಟ್ ಆಗಿದ್ದಾರೆ.

ಹುಬ್ಬಳ್ಳಿ ನಗರದ ಬ್ರಹ್ಮಗಿರಿ ಕಾಲೋನಿಯಲ್ಲಿ ನಿಂಗವ್ವ ಮುಳಗುಂದ ವಾಸವಾಗಿದ್ದರು. ನವೆಂಬರ್ 4 ರಂದು ತಮ್ಮ ಮನೆಯಲ್ಲಿ ಮಲಗಿದ್ದರು. ಮನೆ ಹೊರಗಡೆಯಿಂದ ಅಶೋಕ್ ಬಾಗಿಲು ಹಾಕಿಕೊಂಡು ಹೋಗಿದ್ದರು. ನಿಂಗವ್ವ ಅವರ ಪತಿ ಮಲ್ಲಪ್ಪ ಮನೆಯ ಹೊರಗಡೆ ಮಲಗಿದ್ದರು. ಆದರೆ ರಾತ್ರಿ ಸಮಯದಲ್ಲಿ ಹಿಂಬಾಗಿಲ ಮೂಲಕ ಮನೆಯೊಳಗೆ ಆಗಮಿಸಿ ನಿಂಗವ್ವರನ್ನು ಕೊಲೆ ಮಾಡಲಾಗಿತ್ತು. ಇತ್ತ ಬೆಳಗ್ಗೆ ಮನೆಗೆ ಬಂದಿದ್ದ ಅಶೋಕ್, ತನ್ನ ತಾಯಿಯನ್ನು ಯಾರೋ ಕೊಲೆ ಮಾಡಿ ಪರಾರಿಯಾಗಿದ್ದಾರೆ ಎಂದು ವಿದ್ಯಾನಗರ ಠಾಣೆ ಪೊಲೀಸರಿಗೆ ಮಾಹಿತಿ ನೀಡಿದ್ದರು. ವಿದ್ಯಾನಗರ ಪೊಲೀಸರು ಸ್ಥಳಕ್ಕೆ ಆಗಮಿಸಿ ಪರಿಶೀಲನೆ ಮಾಡಿದ್ದಾರೆ. ನಂತರ ಶ್ವಾನದಳ, ಬೆರಳಚ್ಚು ತಜ್ಞರು, ಹುಬ್ಬಳ್ಳಿ-ಧಾರವಾಡ ನಗರ ಪೊಲೀಸ್ ಆಯುಕ್ತ ಎನ್ ಶಶಿಕುಮಾರ್ ಕೂಡ ಭೇಟಿ ನೀಡಿ ಪರಿಶೀಲನೆ ಮಾಡಿದ್ದಾರೆ. ಮೊದಲಿಗೆ ಯಾರೋ ದುಷ್ಕರ್ಮಿಗಳು ಹಿಂಬಾಗಿಲ ಮೂಲಕ ಬಂದು ವೃದ್ಧೆಯ ಕೊಲೆ ಮಾಡಿ ಹೋಗಿದ್ದಾರೆ ಎಂದು ಶಂಕಿಸಲಾಗಿತ್ತು. ಆದರೆ ವಿಚಾರಣೆ ವೇಳೆ ಕೊಲೆ ಮಾಡಿದ ಆರೋಪಿ ಬಗ್ಗೆ ತಿಳಿದು ಸ್ವತಃ ಪೊಲೀಸರೇ ಶಾಕ್ ಆಗಿದ್ದಾರೆ. ಏಕೆಂದರೆ ನಿಂಗವ್ವರನ್ನು ಕೊಲೆ ಮಾಡಿದ್ದು, ಬೇರಾರೂ ಅಲ್ಲಾ, ಹೆತ್ತು ಹೊತ್ತು ಸಾಕಿ ಸಲುಹಿದ್ದ ಪುತ್ರ.

**ಸಹೋದರನ ಮೇಲೆ ಅನುಮಾನ**

ಅಶೋಕ್‌ನೇ ತಾಯಿಯನ್ನು ಕೊಂದು ಬಳಿಕ ತಾನೇ ಪೊಲೀಸರಿಗೆ ಮಾಹಿತಿ ನೀಡಿದ್ದ. ಆರಂಭದಲ್ಲಿ ಪೊಲೀಸರು ಕೂಡ ಯಾರೋ ಕೊಲೆ ಮಾಡಿರಬಹುದು ಅಂತ ಅಂದುಕೊಂಡಿದ್ದರು. ಆದರೆ ನಿಂಗವ್ವ ಅವರ ಹೆಣ್ಣು ಮಕ್ಕಳು ಸ್ವತಃ ಸಹೋದರನ ಮೇಲೆ ಅನುಮಾನ ವ್ಯಕ್ತಪಡಿಸಿದ್ದರು. ಅನುಮಾನ ಹಿನ್ನೆಲೆ ಪೊಲೀಸರು ಅಶೋಕ್‌ನನ್ನು ವಶಕ್ಕೆ ಪಡೆದು ವಿಚಾರಣೆ ಮಾಡಿದ್ದರು. ಈ ವೇಳೆ ಮಗನೇ ತಾಯಿಯನ್ನು ಕೊಲೆ ಮಾಡಿರುವ ಅಸಲಿ ವಿಚಾರ ಗೊತ್ತಾಗಿದೆ.


**ಕೊಲೆಗೆ ಚಿನ್ನ, ಸೈಟ್ ಕಾರಣ**

ಚಿನ್ನ ಮತ್ತು ಸೈಟ್ ವಿಚಾರವೇ ನಿಂಗವ್ವ ಅವರ ಕೊಲೆಗೆ ಕಾರಣ. ನಿಂಗವ್ವ ಅವರಿಗೆ ನಾಲ್ವರು ಹೆಣ್ಣು ಮಕ್ಕಳು ಮತ್ತು ಓರ್ವ ಗಂಡು ಮಗ. ಅಶೋಕ್ ಹೊಸ ಮನೆ ಕಟ್ಟಿಸಿಕೊಂಡು ವಾಸವಾಗಿದ್ದರು. ನಿಂಗವ್ವ ಮತ್ತು ಪತಿ ಹೇಗೋ ಜೀವನ ಸಾಗಿದ್ದರು. ಹೆತ್ತವರ ಕಾಳಜಿ ಮಾಡದ ಅಶೋಕ್, ತನ್ನ ತಾಯಿಯಿ ಮೈಮೇಲಿದ್ದ ಬಂಗಾರಕ್ಕೆ ಮಾತ್ರ ಆಸೆ ಪಟ್ಟಿದ್ದರಂತೆ. ವರ್ಷದ ಹಿಂದೆ ನಿಂಗವ್ವ ಅವರು ತನ್ನ ಮೈಮೇಲಿದ್ದ 30 ಗ್ರಾಂ ಬಂಗಾರವನ್ನು ತನ್ನ ಹೆಣ್ಣು ಮಕ್ಕಳಿಗೆ ನೀಡಿದ್ದರಂತೆ. ಹೀಗಾಗಿ ಅಶೋಕ್ ಹಿಂಸೆ ನೀಡುತ್ತಿದ್ದರಂತೆ. ಬಂಗಾರ ಕೊಟ್ಟವರ ಮನೆಯಲ್ಲಿಯೇ ಹೋಗಿ ನೀನು ಇರುವಂತೆ ತಾಯಿಗೆ ಹೇಳುತ್ತಿದ್ದರಂತೆ.

ಆಗಾಗ ಹಲ್ಲೆ ಮಾಡಿ, ಧಮ್ಕಿ ಹಾಕಿ ಕೂಡ ಹೋಗುತ್ತಿದ್ದರು ಎನ್ನಲಾಗಿದೆ. ಇನ್ನು ನಿಂಗವ್ವ ಅವರು ಸೈಟ್‌ವೊಂದನ್ನು ಕೂಡ ಹೆಣ್ಣು ಮಕ್ಕಳಿಗೆ ನೀಡಲು ಮುಂದಾಗಿದ್ದು, ಇದು ಅಶೋಕ್ ಆಕ್ರೋಶಕ್ಕೆ ಕಾರಣವಾಗಿತ್ತು. ಹೀಗಾಗಿ ನಿಂಗವ್ವರನ್ನು ಮನೆಯಲ್ಲಿ ಕೂಡಿ ಹಾಕಿ, ಬೀಗ ಹಾಕಿಕೊಂಡು ಹೋಗಿದ್ದರಂತೆ. ರಾತ್ರಿ ಮನೆಗೆ ಬಂದ ಅಶೋಕ್, ಕಟ್ಟಿಗೆ ಮಣೆಯಿಂದ ಹೊಡೆದು ತನ್ನ ತಾಯಿಯನ್ನು ಕೊಲೆ ಮಾಡಿ ಹೋಗಿದ್ದಾರೆ. ತಾಯಿಯನ್ನು ಚೆನ್ನಾಗಿ ನೋಡಿಕೊಳ್ಳಬೇಕಿದ್ದ ಮಗ ತಾಯಿಯನ್ನು ಕೊಲೆ ಮಾಡಿ ಇದೀಗ ಜೈಲು ಸೇರಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

## ಯುವಕ ಪ್ರೀತಿ ನಿರಾಕರಿಸಿದ್ದಕ್ಕೆ ಬೆಂಗಳೂರಿನ ಶಾಲಾ-ಕಾಲೇಜುಗಳಿಗೆ ಬಾಂಬ್ ಬೆದರಿಕೆ ಕರೆ



**ಬೆಂಗಳೂರು:** ಯುವಕ ಪ್ರೀತಿ ನಿರಾಕರಿಸಿದ್ದಕ್ಕೆ ಬೆಂಗಳೂರಿನ ಶಾಲಾ-ಕಾಲೇಜುಗಳಿಗೆ ಹುಸಿಬಾಂಬ್ ಬೆದರಿಕೆ ಹಾಕಿದ್ದ ಟೆಕ್ಕಿಯನ್ನು ಪೊಲೀಸರು ಬಂಧಿಸಿದ್ದಾರೆ.

ಪ್ರಿಯಕರನಿಂದ ಪ್ರೇಮ ವಂಚನೆಗೊಳಗಾದ ಸಾಫ್ಟ್‌ವೇರ್ ಎಂಜಿನಿಯರ್ ರೆನಿ ಜೊಶೀಲ್ಡಾ ಪ್ರಮುಖ ಆರೋಪಿಯಾಗಿದ್ದು, ಉತ್ತರ ವಿಭಾಗದ ಸೆನ್ ಪೊಲೀಸರು ಬಂಧಿಸಿದ್ದಾರೆ. ಆರೋಪಿತೆ ಗುಜರಾತ್ ಅಹಮದಾಬಾದ್ ಕೇಂದ್ರ ಕಾರಾಗೃಹದಲ್ಲಿ ಇದ್ದುಕೊಂಡು ಬಾಂಬ್ ಬೆದರಿಕೆ ಹಾಕಿದ್ದಳು.

ಆರೋಪಿತೆ ಸಾಫ್ಟ್‌ವೇರ್ ಇಂಜಿನಿಯರ್ ಉದ್ಯೋಗಿ. ಬೆಂಗಳೂರಿನ ಪಬ್ಲಿಕ್ ಶಾಲೆಯೊಂದಕ್ಕೆ ಇಮೇಲ್ ಬಾಂಬ್ ಬೆದರಿಕೆ ಸಂದೇಶ ಕಳುಹಿಸಿದ್ದಳು. ಜೂ.14 ರಂದು ಕಲಾಸಿಪಾಳ್ಯ ಪೊಲೀಸ್ ಠಾಣೆ ವ್ಯಾಪ್ತಿಯ ಶಾಲೆಗೆ ಬಾಂಬ್ ಬೆದರಿಕೆ ಕರೆಬಂದಿತ್ತು. ಕಲಾಸಿಪಾಳ್ಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿತ್ತು. ಪೊಲೀಸ್ ಆಯುಕ್ತರು, ಉತ್ತರ ವಿಭಾಗ ಸೈಬರ್ ಪೊಲೀಸ್ ಠಾಣೆಗೆ ಪ್ರಕರಣ ವರ್ಗಾವಣೆ ಮಾಡಿದ್ದರು. ಆರೋಪಿತೆ VPN, ಇಂಟರನೆಟ್ ಬಳಕೆ ಮಾಡುತ್ತಿದ್ದಳು.

ಗೇಟ್ ಕೋಡ್ ಎಂಬ ಅಪ್ಲಿಕೇಶನ್‌ನ ವರ್ಚುವಲ್ ಮೊಬೈಲ್ ನಂಬರ್ ಪಡೆದುಕೊಳ್ಳುತ್ತಿದ್ದಳು. ಸುಮಾರು ಆರರಿಂದ ಏಳು ವಾಟ್ಸಪ್ ಖಾತೆಗಳನ್ನು ನಿರ್ವಹಣೆ ಮಾಡುತ್ತಿದ್ದಳು. ಬಾಂಡಿ ವಾರೆಂಟ್ ಮುಖಾಂತರ ಗುಜರಾತ್‌ನಿಂದ ಕರೆದುಕೊಂಡು ಬಂದು ವಿಚಾರಣೆ ನಡೆಸಲಾಗುತ್ತಿದೆ. ವಿಚಾರಣೆ ವೇಳೆ ಬೆಂಗಳೂರಿನ ಕಲಾಸಿಪಾಳ್ಯ ಸೇರಿ ಇತರೆ ಆರು ಪ್ರಕರಣಗಳಲ್ಲಿ ಭಾಗಿಯಾಗಿರುವ ಬಗ್ಗೆ ಮಾಹಿತಿ ಸಿಕ್ಕಿದೆ. ಆರೋಪಿತಳ ವಿರುದ್ಧ ಗುಜರಾತ್, ಮೈಸೂರು, ತಮಿಳುನಾಡಿನ ಚೆನ್ನೈನಲ್ಲಿ ಹುಸಿಬಾಂಬ್ ಬೆದರಿಕೆ ಪ್ರಕರಣ ದಾಖಲಾಗಿದೆ.

ಆರೋಪಿತೆಯ ಪ್ರೀತಿ ನಿರಾಕರಣೆ ಮಾಡಿದ ಯುವಕನ ಸಂಕಷ್ಟಕ್ಕೆ ಸಿಕ್ಕಿಸಲು ಈ ಕೃತ್ಯ ಎಸಗಿದ್ದಾಳೆ. ಯುವಕನ ಇಮೇಲ್ ಐಡಿ ಬಳಸಿಕೊಂಡು ಹುಸಿಬಾಂಬ್ ಇಮೇಲ್ ಬೆದರಿಕೆ ಕಳಿಸಿದ್ದಳು. ಯುವಕನನ್ನ ಪದೇ ಪದೇ ಪ್ರೀತಿ ಮಾಡುವಂತೆ ಒತ್ತಾಯ ಮಾಡ್ತಿದ್ದಳು. ಆರೋಪಿತೆಯ ಪ್ರೀತಿ ಮತ್ತು ಗೆಳೆತನವನ್ನು ಯುವಕ ನಿರಾಕರಿಸಿದ್ದ. ಇದೇ ದ್ವೇಷಕ್ಕೆ ಆತನ ಹೆಸರಲ್ಲಿ ಹುಸಿಬಾಂಬ್ ಬೆದರಿಕೆ ಕಳುಹಿಸಿದ್ದಾಳೆ.

ಬೆಂಗಳೂರಿನ ಆರರಿಂದ ಏಳು ಶಾಲೆಗಳಿಗೆ ಹುಸಿಬಾಂಬ್ ಇಮೇಲ್ ಮಾಡಿದ್ದಳು. ಅಷ್ಟೇ ಅಲ್ಲದೆ ಅಹಮದಾಬಾದ್‌ನ ನರೇಂದ್ರ ಮೋದಿ ಸ್ಟೇಡಿಯಂಗೆ ಬಾಂಬ್ ಬೆದರಿಕೆ ಹಾಕಿದ್ದಳು. ಗುಜರಾತ್‌ನ ವಿಮಾನ ದುರಂತದ ಹಾಗೆ ನಿಮ್ಮ ಶಾಲೆಗಳನ್ನ ಉಡಾಯಿಸುವುದಾಗಿ ಬೆದರಿಕೆ ಹಾಕಿದ್ದಳು. ಸದ್ಯ ಕೂಲಂಕುಷವಾಗಿ ಆರೋಪಿತೆಯ ವಿಚಾರಣೆಯನ್ನು ಪೊಲೀಸರು ನಡೆಸುತ್ತಿದ್ದಾರೆ.

## 5 ಜಿಲ್ಲೆಯ ಪೊಲೀಸರಿಗೆ ಬೇಕಾಗಿದ್ದ ನಟೋರಿಯಸ್ ಕಳ್ಳ ಅರೆಸ್ಟ್





**ಬೆಂಗಳೂರು:** ಐದು ಜಿಲ್ಲೆಯ ಪೊಲೀಸ ರಿಗೆ ಬೇಕಾಗಿದ್ದ ನಟೋರಿಯಸ್ ಕಳ್ಳನನ್ನು ಬೆಂಗಳೂರಿನ ವಿದ್ಯಾರಣ್ಯಪುರ ಪೊಲೀಸರು ಬಂಧಿಸಿದ್ದಾರೆ.

ಅಸ್ಲಾಂ ಪಾಷಾ ಬಂಧಿತ ಆರೋಪಿ. ಈತನ ಕಳ್ಳತನದ ಕೆರಿಯರ್‌ನಲ್ಲಿ ಇದುವರೆಗೂ 150 ಕಳ್ಳತನದ ಕೇಸ್ ದಾಖಲಾಗಿದೆ. ಅಸ್ಲಾಂ ಬೆಂಗಳೂರು, ಬೆಂಗಳೂರು ಗ್ರಾಮಾಂತರ, ಶಿವಮೊಗ್ಗ, ಹಾವೇರಿ, ದಾವಣಗೆರೆ ಜಿಲ್ಲೆಗಳಲ್ಲಿ ಮನೆಗಳ್ಳತನ ಮಾಡಿದ್ದಾನೆ. ಹಗಲೆಲ್ಲಾ ಐಷಾರಾಮಿ ಮನೆಗಳನ್ನ ರೆಕ್ಕಿ ಮಾಡೋದು, ತಡರಾತ್ರಿ ಕೈಚಳಕ ತೋರಿಸುವುದೇ ಈತನ ಕೆಲಸ. ಕಿಟಕಿ ತೆರೆದು ಮಹಿಳೆಯರು ನಿದ್ರೆಗೆ ಜಾರಿದ್ರೆ, ಕುತ್ತಿಗೆಯಲ್ಲಿರುವ ಸರ ಎಗರಿಸಿ ಎಸ್ಕೇಪ್ ಆಗುತ್ತಿದ್ದ. ಕಿಟಕಿ ಪಕ್ಕದಲ್ಲಿ ಮೈನ್ ಡೋರ್ ಇದ್ದರೆ ಕಿಟಕಿ ಗ್ಲಾಸ್ ಒಡೆದು ಹಾಲು ಪೇಪರ್ ಮನೆಬಳಿ ಬಿದ್ದಿದ್ದು, ಮೈನ್ ಡೋರ್ ಲಾಕ್ ಆಗಿದ್ರೆ ಅದೇ ಮನೆಯನ್ನ ಟಾರ್ಗೆಟ್ ಮಾಡುತ್ತಿದ್ದ. ಮನೆಯಲ್ಲಿ ಲೈಟ್ಸ್ ಆಫ್ ಆಗಿದ್ದು, ಮನೆಯ ಗೇಟ್ ಹೊರಗಿನಿಂದ ಲಾಕ್ ಆಗಿದ್ರು ಕಳ್ಳತನ ಮಾಡುತ್ತಿದ್ದ.

ಕಳ್ಳತನದಿಂದ ಬಂದ ಹಣದಲ್ಲಿ ಅಸ್ಲಾಂ ಮೋಜುಮಸ್ತಿ ಮಾಡಿ ಹಣ ಖಾಲಿ ಮಾಡುತ್ತಿದ್ದ. ಒಂದು ಠಾಣೆ ವ್ಯಾಪ್ತಿಯಲ್ಲಿ ಕಳ್ಳತನ ಮಾಡಿದ್ರೆ ಆ ಕೇಸ್ ಹಳೇದಾಗೋವರೆಗೂ ಮತ್ತೆ ಬರುತ್ತಿರಲಿಲ್ಲ. ಕನಿಷ್ಟ ಒಂದು ವರ್ಷವಾದರೂ ಮತ್ತೆ ಆ ಏರಿಯಾಗೆ ಕಾಲಿಡುತ್ತಿರಲಿಲ್ಲ. ಆರೋಪಿ ಅಸ್ಲಾಂ ಕದ್ದ ಹಣದಲ್ಲಿ ದೇವರಿಗೂ ಪಾಲು ಕೊಡುತ್ತಿದ್ದ. ಕಳೆದ 20 ವರ್ಷಗಳಿಂದ ಕಳ್ಳತನವೇ ಆತನ ಫುಲ್ ಟೈಂ ಕೆಲಸವಾಗಿತ್ತು. ಅಸ್ಲಾಂ ತಂದೆ ತಾಯಿಗೆ ಒಟ್ಟು ಏಳು ಜನ ಮಕ್ಕಳು. ಏಳು ಜನ ಮಕ್ಕಳ ಪೈಕಿ ಮೂವರದ್ದು ಕಳ್ಳತನವೇ ಕೆಲಸವಾಗಿತ್ತು.

ಇನ್ನು ಆರೋಪಿ ಅಸ್ಲಾಂ, ಕದ್ದ ಹಣದಲ್ಲಿ ಒಂದು ಪಾಲು ಅಜ್ಮೀರ್ ದರ್ಗಾಗೆ ಕಾಣಿಕೆ ಹಾಕುತ್ತಿದ್ದ. ಪ್ರತಿ ಬಾರಿ ಕಳ್ಳತನ ಮಾಡಿದಾಗ ಅಸ್ಲಾಂ, ಅಜ್ಮೀರ್ ದರ್ಗಾಗೆ ಹೋಗಿ, ಪ್ರಾರ್ಥನೆ ಮುಗಿಸಿ ಗೋವಾಗೆ ಹೋಗಿ ಮಜಾ ಮಾಡಿ ಬರುತ್ತಿದ್ದ. ನಂತರ ಮನೆಗೆ ಬಂದು ಕುಟುಂಬಸ್ಥರಿಗೆ ಹಣ ಕೊಡುತ್ತಿದ್ದ. ಅಲ್ಲದೇ ಜೈಲಿನಿಂದ ಬಿಡಿಸಲು ಮಾಡಿದ್ದ ಸಾಲದ ಹಣ ತೀರಿಸುತ್ತಿದ್ದ. ಮತ್ತೆ ಮುಂದೆ ಇನ್ನೊಂದು ಕಳ್ಳತನಕ್ಕೆ ಮುಂದಾಗುತ್ತಿದ್ದ. ಸದ್ಯ ಆರೋಪಿ ಅಸ್ಲಾಂನನ್ನು ಬಂಧಿಸಿರುವ ವಿದ್ಯಾರಣ್ಯಪುರ ಪೊಲೀಸರು ಆತನಿಂದ 22.5 ಲಕ್ಷ ಮೌಲ್ಯದ ಚಿನ್ನಾಭರಣವನ್ನು ವಶಕ್ಕೆ ಪಡೆದಿದ್ದಾರೆ

# ಈ ಬಾರಿ ಒಂದೇ ತಿಂಗಳಲ್ಲಿ ಎರಡು ಕಡಲೆಕಾಯಿ ಪರಿಷೆಗಳ ಸಂಭ್ರಮ

ಬೆಂಗಳೂರು :ಬೆಂಗಳೂರಿನಲ್ಲಿ ಈ ಬಾರಿ ಒಂದೇ ತಿಂಗಳಲ್ಲಿ ಎರಡು ಕಡಲೆಕಾಯಿ ಪರಿಷೆಗಳ ಸಂಭ್ರಮವಿದೆ. ಮೊದಲು ಮಲ್ಲೇಶ್ವರಂನಲ್ಲಿ ನವೆಂಬರ್ 8 ರಿಂದ 10ರವರೆಗೆ ಮೂರು ದಿನಗಳ ರೈತ ಸ್ನೇಹಿ ಕಡಲೆಕಾಯಿ ಪರಿಷೆ, ನಂತರ ಬಸವನಗುಡಿಯಲ್ಲಿ ನವೆಂಬರ್ 17ರಿಂದ 21ರವರೆಗೆ ಐದು ದಿನಗಳ ಐತಿಹಾಸಿಕ ಕಡಲೆಕಾಯಿ ಪರಿಷೆ. ಈ ಎರಡೂ ಉತ್ಸವಗಳ ಸಿದ್ಧತೆಗಳು ಜೋರಾಗಿವೆ. ಬೆಂಗಳೂರಿನ ಸಾಂಪ್ರದಾಯಿಕ ಸಂಸ್ಕೃತಿ ಮತ್ತು ರೈತರ ಜೀವನಕ್ಕೆ ಸಂಬಂಧಿಸಿದ ಈ ಪರಿಷೆಗಳು ಲಕ್ಷಾಂತರ ಜನರನ್ನು ಆಕರ್ಷಿಸುತ್ತವೆ.

ಕಾಡುಮಲ್ಲೇಶ್ವರ ಗೆಳಯರ ಬಳಗದ ಆಶ್ರಯದಲ್ಲಿ ಶ್ರೀ ಭ್ರಮರಂಭ ಸಮೇತ ಶ್ರೀ ಕಾಡುಮಲ್ಲಿಕಾರ್ಜುನ ಸ್ವಾಮಿ ದೇವಾಲಯದಲ್ಲಿ ನಡೆಯುವ 9ನೇ ವರ್ಷದ ಮಲ್ಲೇಶ್ವರ ಕಡಲೆಕಾಯಿ ಪರಿಷೆ ನವೆಂಬರ್ 8ರಿಂದ 10ರವರೆಗೆ ಮೂರು ದಿನಗಳ ಕಾಲ ನಡೆಯಲಿದೆ. ಈ ಪರಿಷೆಯ ವಿಶೇಷತೆ ಎಂದರೆ ರೈತ ಸ್ನೇಹಿ ಮಾದರಿ. ಕರ್ನಾಟಕ, ತಮಿಳುನಾಡು, ತೆಲಂಗಾಣ, ಆಂಧ್ರಪ್ರದೇಶದ ರೈತರು ತಮ್ಮ ಕಡಲೆಕಾಯಿ, ಇತರ ಬೆಳೆಗಳನ್ನು ನೇರವಾಗಿ ಬೀದಿ ಬದಿಯಲ್ಲಿ ಮಾರಾಟ ಮಾಡಬಹುದು.

ಮಧ್ಯವರ್ತಿಗಳಿಲ್ಲದೆ ರೈತರಿಗೆ ಉತ್ತಮ ಬೆಲೆ ಸಿಗುವಂತೆ ವ್ಯವಸ್ಥೆ ಮಾಡಲಾಗಿದೆ. ನವೆಂಬರ್ 8ರ ಸಂಜೆ 5 ಗಂಟೆಗೆ ಮುಜರಾಯಿ ಮತ್ತು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ, ವಿಧಾನಪರಿಷತ್ ಸದಸ್ಯ ಬಿ.ಕೆ. ಹರಿಪ್ರಸಾದ್, ಹಲವು ಗಣ್ಯರು ಮತ್ತು ಕಲಾವಿದರು ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಕಾಡುಮಲ್ಲೇಶ್ವರ ಗೆಳಯರ ಬಳಗದ ಅಧ್ಯಕ್ಷ ಬಿ.ಕೆ. ಶಿವರಾಂ ಸುದ್ದಿಗೋಷ್ಠಿಯಲ್ಲಿ ಈ ಮಾಹಿತಿ ನೀಡಿದರು. “ರೈತರಿಗೆ ನೇರ ಮಾರುಕಟ್ಟೆ ಸೃಷ್ಟಿಸುವುದು ನಮ್ಮ ಗುರಿ. ಈ ಪರಿಷೆಯಲ್ಲಿ ಸಾವಯವ ಕಡಲೆಕಾಯಿ, ಸ್ಥಳೀಯ ಬೆಳೆಗಳಿಗೆ ಆದ್ಯತೆ” ಎಂದು ಅವರು ತಿಳಿಸಿದರು.



ಬಸವನಗುಡಿ ಕಡಲೆಕಾಯಿ ಪರಿಷೆ ಈ ಬಾರಿ ಐತಿಹಾಸಿಕ ಬದಲಾವಣೆ ಕಾಣುತ್ತಿದೆ. ಸಾಮಾನ್ಯವಾಗಿ 2 ದಿನಗಳ ಕಾಲ ನಡೆಯುತ್ತಿದ್ದ ಈ ಉತ್ಸವವನ್ನು ಮೊದಲ ಬಾರಿಗೆ 5 ದಿನಗಳಿಗೆ ವಿಸ್ತರಿಸಲಾಗಿದೆ. ನವೆಂಬರ್ 17ರಿಂದ 21ರವರೆಗೆ ನಡೆಯುವ ಈ ಪರಿಷೆಯು ಪ್ಲಾಸ್ಟಿಕ್ ಮುಕ್ತವಾಗಿ ಆಚರಿಸಲಾಗುವುದು. ಕಳೆದ ವರ್ಷ ಸುಮಾರು 5 ಲಕ್ಷ ಜನ ಭಾಗವಹಿಸಿದ್ದರು. ಈ ಬಾರಿ ಇನ್ನೂ ಹೆಚ್ಚು ಜನಸಾಗರ ಬರುವ ನಿರೀಕ್ಷೆ ಇದೆ.

ಉದ್ಘಾಟನಾ ದಿನವಾದ ನವೆಂಬರ್ 17ರಂದು 21 ಬಸವಣ್ಣಗಳ ಆಹ್ವಾನ ಮತ್ತು ವಿಶೇಷ ಪೂಜೆ ನಡೆಯಲಿದೆ. ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್, ಸಚಿವ ರಾಮಲಿಂಗಾ ರೆಡ್ಡಿ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ. ಬೃಹತ್ ಬಸವೇಶ್ವರ ದೇವಾಲಯದ ಸುತ್ತಲೂ ಸಾವಿರಾರು ಕಡಲೆಕಾಯಿ ಅಂಗಡಿಗಳು ತಲೆ ಎತ್ತಲಿವೆ. ಸಾಂಪ್ರದಾಯಿಕ ಬಸವನಗುಡಿ ಬುಲ್ಲಾ ಟೆಂಪಲ್ ರಸ್ತೆಯಲ್ಲಿ ರಂಗೋಲಿ, ದೀಪಾಲಂಕಾರ, ಸಾಂಸ್ಕೃತಿಕ ಕಾರ್ಯಕ್ರಮಗಳು ಜೋರಾಗಲಿವೆ. ಎರಡೂ ಪರಿಷೆಗಳಲ್ಲಿ ಜನಸಂದಣಿ ನಿಯಂತ್ರಣಕ್ಕೆ ವಿಶೇಷ ಗಮನ ನೀಡಲಾಗಿದೆ. ಬಸವನಗುಡಿಯಲ್ಲಿ

**ನುಗ್ಗಲು ತಡೆಗೆ ಪೊಲೀಸ್ ಸಹಕಾರ**

**ನಿರಂತರ ವಿದ್ಯುತ್, ಕುಡಿಯುವ ನೀರು, ಸಾರ್ವಜನಿಕ ಶೌಚಾಲಯ ಬೀದಿ ದೀಪಗಳ ದುರಸ್ತಿ, ಹೆಚ್ಚು ಸಿ.ಸಿ.ಟಿ.ವಿ ಕ್ಯಾಮೆರಾಗಳು ಅಗ್ನಿಶಾಮಕ ವಾಹನ, ತುರ್ತು ಚಿಕಿತ್ಸಾ ವಾಹನ, ಮಾರ್ಷಲ್‌ಗಳ ನಿಯೋಜನೆ**

ಮಲ್ಲೇಶ್ವರಂನಲ್ಲಿಯೂ ಇದೇ ರೀತಿಯ ವ್ಯವಸ್ಥೆಗಳಿವೆ. ಆರೋಗ್ಯ ಮತ್ತು ಸ್ವಚ್ಛತೆಗೆ ಒತ್ತು ನೀಡಲಾಗಿದೆ. ಪ್ಲಾಸ್ಟಿಕ್ ಬಳಕೆ ಸಂಪೂರ್ಣ ನಿಷೇಧ. ಬದಲಿಗೆ ಕಾಗದ, ಬಟ್ಟೆ ಚೀಲಗಳು ಪ್ರೋತ್ಸಾಹಿಸಲಾಗುತ್ತಿದೆ.

ಕಡಲೆಕಾಯಿ ಪರಿಷೆ ಬೆಂಗಳೂರಿನ ಸಾಂಪ್ರದಾಯಿಕ ಗುರುತು. ಬಸವನಗುಡಿಯಲ್ಲಿ ನಡೆಯುವ ಪರಿಷೆಯು ಬಸವೇಶ್ವರ ದೇವಾಲಯದ ಐತಿಹಾಸಿಕ ಕಥೆಯೊಂದಿಗೆ ಸಂಬಂಧ ಹೊಂದಿದೆ. ರೈತರು ತಮ್ಮ ಮೊದಲ ಕಡಲೆಕಾಯಿ ಬೆಳೆಯನ್ನು ದೇವರಿಗೆ ಸಮರ್ಪಿಸುವ ಸಂಪ್ರದಾಯ ಇದು. ಮಲ್ಲೇಶ್ವರಂ ಪರಿಷೆಯು ರೈತರ ಆರ್ಥಿಕ ಸಬಲೀಕರಣಕ್ಕೆ ಒತ್ತು ನೀಡುತ್ತದೆ.

ಈ ಎರಡೂ ಉತ್ಸವಗಳು ಬೆಂಗಳೂರಿನ ಸಾಂಸ್ಕೃತಿಕ ವೈವಿಧ್ಯತೆಯನ್ನು ಪ್ರತಿಬಿಂಬಿಸುತ್ತವೆ. ಕರ್ನಾಟಕದ ಗ್ರಾಮೀಣ ಜೀವನ, ರೈತರ ಶ್ರಮ, ಸ್ಥಳೀಯ ಬೆಳೆಗಳ ಮಹತ್ವವನ್ನು ಎತ್ತಿ ತೋರಿಸುತ್ತವೆ. ಲಕ್ಷಾಂತರ ಜನ ಸೇರುವ ಈ ಕಾರ್ಯಕ್ರಮಗಳು ಪ್ರವಾಸೋದ್ಯಮಕ್ಕೂ ಉತ್ತೇಜನ ನೀಡುತ್ತವೆ.

ನವೆಂಬರ್ 8ರಿಂದ 10ರವರೆಗೆ ಮಲ್ಲೇಶ್ವರಂನಲ್ಲಿ ರೈತರ ಕಡಲೆಕಾಯಿ ಮಾರಾಟ, ಸಾಂಸ್ಕೃತಿಕ ಕಾರ್ಯಕ್ರಮಗಳು. ನವೆಂಬರ್ 17ರಿಂದ 21ರವರೆಗೆ ಬಸವನಗುಡಿಯಲ್ಲಿ ವಿಜೃಂಭಣೆಯ ಉತ್ಸವ. ಎರಡೂ ಕಡೆಯೂ ಕಡಲೆಕಾಯಿ ಚಟ್ನಿ, ಲಡ್ಡು, ಮಿಶ್ರಣ, ಹುರಿದ ಕಡಲೆಕಾಯಿಗಳ ಸುಗಂಧ ತುಂಬಲಿದೆ. ಬೆಂಗಳೂರಿಗರಿಗೆ ಈ ತಿಂಗಳು ಸಂಭ್ರಮದ ತಿಂಗಳು ಎನ್ನಬಹುದು.

# ಗುರ್ಲಾಪೂರ 50 ಲಕ್ಷ ರೈತರ ಹೆದ್ದಾರಿ ತಡೆ ಸಚಿವ ಎಚ್.ಕೆ. ಪಾಟೀಲ್ ಸಂಧಾನ ವಿಫಲ



**ಬೆಳಗಾವಿ:** ಕಬ್ಬು ಬೆಳೆಗಾರರ ಹೋರಾಟ ಜೋರಾಗಿ ಮುಂದುವರೆದಿದೆ. ಬೆಳಗಾವಿ ಜಿಲ್ಲೆಯ ಗುರ್ಲಾಪೂರದಲ್ಲಿ ನಡೆಯುತ್ತಿರುವ ರೈತರ ಪ್ರತಿಭಟನೆಯಲ್ಲಿ ಸಚಿವ ಎಚ್.ಕೆ. ಪಾಟೀಲ್ ಅವರೊಂದಿಗಿನ ಮಾತುಕತೆ ಸಂಪೂರ್ಣವಾಗಿ ಮುರಿದುಬಿದ್ದಿದೆ. ಸರ್ಕಾರದ ಪ್ರತಿನಿಧಿಯಾಗಿ ಬಂದ ಸಚಿವರೊಂದಿಗೆ ಸರಿಸುಮಾರು ಒಂದು ಗಂಟೆಗೂ ಹೆಚ್ಚು ಸಂಧಾನ ನಡೆದರೂ, ಯಾವುದೇ ಫಲವಿಲ್ಲ. ರೈತ ಮುಖಂಡರು ಗುರುವಾರ ಸಂಜೆ 5 ಗಂಟೆಯವರೆಗೆ ಅಂತಿಮ ಗಡುವು ನೀಡಿದ್ದಾರೆ. ಒಂದು ವೇಳೆ ಬೇಡಿಕೆಗಳು ಈಗಾಗಿಯೇ ಈಡೇರದಿದ್ದರೆ, ಶುಕ್ರವಾರ (ನವೆಂಬರ್ 7) 50 ಲಕ್ಷ ರೈತರೊಂದಿಗೆ ರಾಷ್ಟ್ರೀಯ ಹೆದ್ದಾರಿಯನ್ನು ತಡೆದು ಪಂಜಾಬ್ ಮಾದರಿಯ ಪ್ರತಿಭಟನೆ ನಡೆಸುವುದಾಗಿ ರೈತ ಮುಖಂಡ ಶಶಿಕಾಂತ್ ನಾಯಕ್ ತಿಳಿಸಿದ್ದಾರೆ.

ಪ್ರತಿಭಟನೆ ವೇಳೆ ಮಾತನಾಡಿದ ಸಚಿವ ಎಚ್.ಕೆ. ಪಾಟೀಲ್, ಮುಖ್ಯಮಂತ್ರಿಗಳು ನನಗೆ ಜವಾಬ್ದಾರಿ ಕೊಟ್ಟು ಇಲ್ಲಿಗೆ ಕಳುಹಿಸಿದ್ದಾರೆ. ನಿಮ್ಮ ಪ್ರತಿನಿಧಿಗಳಾದ 10-20 ರೈತರನ್ನು ನಾಳೆ ಸಂಜೆ 6 ಗಂಟೆಗೆ ಬೆಂಗಳೂರಿಗೆ ಕರೆದೊಯ್ಯಿರಿ. ಅಲ್ಲಿ ಸಿಎಂ ಅವರೊಂದಿಗೆ ಮಾತುಕತೆ ನಡೆಸೋಣ. ನಾಳೆಯೇ 7ನೇ ತಾರೀಖಿನಂದು 2 ಗಂಟೆಗಳೊಳಗೆ ನಿಮ್ಮ ಬೇಡಿಕೆಗಳಿಗೆ ಸರ್ಕಾರ ಪರಿಹಾರ ಕಂಡುಕೊಳ್ಳುತ್ತದೆ. ನಾನೇ ನಿಮ್ಮ ಪರ ವಕೀಲನಾಗಿ ಸಿಎಂ ಮುಂದೆ ದನಿ ಎತ್ತುತ್ತೇನೆ ಎಂದು ಭರವಸೆ ನೀಡಿದ್ದಾರೆ. ಆದರೆ ರೈತರು ಇದನ್ನು ತಳ್ಳಿಹಾಕಿದ್ದಾರೆ. ನಾವು ಬೆಂಗಳೂರಿಗೆ ಬರುವುದಿಲ್ಲ. ನಾಳೆ ಸಂಜೆ 5 ಗಂಟೆಯವರೆಗೆ ಇಲ್ಲೇ ಡೆಡ್‌ಲೈನ್.

ನಮ್ಮ ಬೇಡಿಕೆಗಳು ಈಡೇರದಿದ್ದರೆ ಗುರ್ಲಾಪೂರದಿಂದಲೇ ಹೋರಾಟ ತೀವ್ರಗೊಳ್ಳುತ್ತದೆ. ನಮ್ಮ ಪರವಾಗಿ ಜಿಲ್ಲಾಧಿಕಾರಿ (ಡಿಸಿ) ಮತ್ತು ಪೊಲೀಸ್ ಆಯುಕ್ತ (ಎಸ್‌ಪಿ)ರನ್ನು ಕರೆದು ಇಲ್ಲೇ ನಿರ್ಧಾರ ತೆಗೆದುಕೊಳ್ಳಿ ಎಂದು ಪಟ್ಟು ಹಿಡಿದಿದ್ದಾರೆ. ಸಚಿವರ ಮಾತುಗಳನ್ನು ಕೇಳದೆಯೇ ರೈತರು ಅವರ ಕಾರ್‌ಗೆ ಅಡ್ಡಾಗಿ ಮಲಗಿ ಪ್ರತಿಭಟನೆಯನ್ನು ಮುಂದುವರೆಸಿದ್ದಾರೆ. ಇದಕ್ಕೂ ಮುಂಚೆಯೇ ಕೊರೆಯುವ ಚಳಿಯಲ್ಲಿ ರಸ್ತೆಯ ಮೇಲೆ ಕುಳಿತು ಪ್ರತಿಭಟಿಸುತ್ತಿದ್ದ ರೈತರು, ಊಟ-ನಿದ್ದೆಯೇ ರಸ್ತೆಯಲ್ಲೇ ನಡೆಸುತ್ತಿದ್ದಾರೆ.


ಮೈಮೇಲೆ ಒಂದು ಟನ್ ಕಬ್ಬಿಗೆ 3,500 ರೂಪಾಯಿ ಬೆಲೆ ನಿಗದಿಪಡಿಸಿ ಎಂಬ ಬರವಣಿಗೆಯೊಂದಿಗೆ ಬಾಯಿ-ಬಾಯಿ ಬಡಿದುಕೊಂಡು ಸರ್ಕಾರದ ಮೇಲೆ ಒತ್ತಡ ಹೇರುತ್ತಿದ್ದಾರೆ. ಈ ಹೋರಾಟಕ್ಕೆ ಜಿಲ್ಲೆಯ ವಿವಿಧ ಆಸ್ಪತ್ರೆಗಳ ವೈದ್ಯರು ಸಹಕಾರ ನೀಡಿದ್ದಾರೆ. ಅಥಣಿಯಲ್ಲಿ ರೈತರು ಸಕ್ಕರೆ ಸಚಿವ ಶಿವಾನಂದ್ ಪಾಟೀಲ್ ಅವರ ಪ್ರತಿಕೃತಿಗೆ ಬೆಂಕಿ ಹಚ್ಚಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಬೆಳಗಾವಿ, ಚಿಕ್ಕೋಡಿ, ವಿಜಯಪುರ ಸೇರಿದಂತೆ ಉತ್ತರ ಕರ್ನಾಟಕದ ಎಲ್ಲ ಭಾಗಗಳಲ್ಲೂ ರೈತರ ಕಿಚ್ಚು ಜೋರಾಗಿದೆ.

ರೈತರ ಹೋರಾಟಕ್ಕೆ ಬಿಜೆಪಿ ಕಾರ್ಯಕರ್ತರು ಮತ್ತು ಕರವೇ ಸಂಘದ ಸದಸ್ಯರೂ ಸಾಥ್ ನೀಡಿದ್ದಾರೆ. ಈ ಪ್ರತಿಭಟನೆಯ ಹಿನ್ನೆಲೆಯಲ್ಲಿ ನಾಳೆ (ನವೆಂಬರ್ 7) ಕ್ಯಾಬಿನೆಟ್ ಸಭೆಯಲ್ಲಿ ಕಬ್ಬು ಬೆಲೆ ವಿಷಯ ಚರ್ಚೆಗೆ ಬರಲಿದೆ ಎಂಬ ಸಾಧ್ಯತೆ ಹೆಚ್ಚಾಗಿದೆ. ರೈತರು ಈಗಾಗಿಯೇ “ಪಂಜಾಬ್ ಮಾದರಿ” ಎಂದು ಕರೆ ನೀಡಿದ್ದಾರೆ, ಅಲ್ಲಿ ರೈತರು ದೆಹಲಿಯ ಹೆದ್ದಾರಿಗಳನ್ನು ತಡೆದು ತಮ್ಮ ಬೇಡಿಕೆಗಳನ್ನು ಈಡೇರಿಸಿಕೊಂಡಿದ್ದರು. ಗುರ್ಲಾಪೂರದ ಈ ಹೋರಾಟವು ಕರ್ನಾಟಕದ ರಾಜಕೀಯಕ್ಕೆ ಹೊಸ ತಿರುವು ನೀಡಬಹುದು ಎಂದು ವಿಶ್ಲೇಷಕರು ಭಾವಿಸುತ್ತಿದ್ದಾರೆ.

**ಕಬ್ಬು ಬೆಳೆಗಾರರ ಪ್ರತಿಭಟನೆಯ ಕಾರಣಗಳು ಏನು?** ಕರ್ನಾಟಕದಲ್ಲಿ ಒಂದು ಟನ್ ಕಬ್ಬಿಗೆ ಸರ್ಕಾರ 3,000 ರೂಪಾಯಿಗಳಷ್ಟು ಬೆಲೆ ನೀಡುತ್ತಿದೆ, ಆದರೆ ಉತ್ಪನ್ನ ವೆಚ್ಚ ಹೆಚ್ಚಾಗುತ್ತಿರುವುದರಿಂದ ರೈತರು ನಷ್ಟ ಅನುಭವಿಸುತ್ತಿದ್ದಾರೆ. ಹೋಲಿಕೆಗೆ, ಮಹಾರಾಷ್ಟ್ರದಲ್ಲಿ ಒಂದು ಟನ್ ಕಬ್ಬಿಗೆ 3,400 ರೂಪಾಯಿ, ಗುಜರಾತ್‌ನಲ್ಲಿ 3,600 ರೂಪಾಯಿಗಳಷ್ಟು ಸಿಗುತ್ತದೆ. ಈ ಅಸಮಾನತೆಯನ್ನು ರೈತರು ಎತ್ತಿ ತೋರಿಸುತ್ತಿದ್ದಾರೆ. ಕಬ್ಬು ಸುಸ್ತುವಿಕೆಯಿಂದಾಗಿ ರೈತರ ಆರ್ಥಿಕ ಸ್ಥಿತಿ ಹಾನಿಗೊಳಗಾಗಿದೆ. ಸರ್ಕಾರವು ಈಗಾಗಿಯೇ ಕಬ್ಬು ಸುಸ್ತುವಿಕೆಯನ್ನು 1.5 ಕೋಟಿ ಟನ್‌ಗಳಿಗೆ ಸೀಮಿತಗೊಳಿಸಿದೆ, ಆದರೆ ಬೆಲೆಯಲ್ಲಿ ಸುಧಾರಣೆ ಇಲ್ಲ. ಈ ಹೋರಾಟವು ಕೇವಲ ಬೆಳಗಾವಿಗೆ ಸೀಮಿತವಲ್ಲ, ಉತ್ತರ ಕರ್ನಾಟಕದ ಎಲ್ಲ ಕಬ್ಬು ಬೆಳೆಗಾರರನ್ನು ಒಗ್ಗೂಡಿಸಿದೆ.ರೈತ ಮುಖಂಡ ಶಶಿಕಾಂತ್ ನಾಯಕ್ ಅವರು ಮಾತನಾಡಿ, ನಾವು ಗುರ್ಲಾಪೂರ ಮಾದರಿಯನ್ನು ಸೃಷ್ಟಿಸುತ್ತೇವೆ. 50 ಲಕ್ಷ ರೈತರು ಒಂದೇ ಧ್ವನಿಯಲ್ಲಿ ಮಾತನಾಡುತ್ತಾರೆ. ಸರ್ಕಾರ ಬೇಡಿಕೆಗಳನ್ನು ಕಡೆಗಣಿಸಿದರೆ, ಹೆದ್ದಾರಿ ತಡೆಯುವುದರಿಂದ ಹಿಂಜರಿಯೋಲ್ಲ ಎಂದು ತಮ್ಮ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಈ ಪ್ರತಿಭಟನೆಯಲ್ಲಿ ಮಹಿಳಾ ರೈತರು ಸಹ ಭಾಗವಹಿಸಿದ್ದಾರೆ, ಅವರು “ನಮ್ಮ ಹೋರಾಟವು ತಮ್ಮ ಹಕ್ಕುಗಳಿಗಾಗಿ” ಎಂದು ಕೂಗುತ್ತಿದ್ದಾರೆ. ಪೊಲೀಸ್ ವ್ಯವಸ್ಥೆಯು ಶಾಂತಿಯುತವಾಗಿ ನಿರ್ವಹಣೆ ಮಾಡುತ್ತಿದ್ದರೂ, ರೈತರ ದೃಢತೆಯಿಂದ ತಂತ್ರಜ್ಞರು ಆಯಾಸಗೊಂಡಿದ್ದಾರೆ.

ಬೆಳಗಾವಿ ಜಿಲ್ಲೆಯಾದ್ಯಂತ ಹಲವಾರು ಪಟ್ಟಣಗಳಲ್ಲಿ ಈ ಹೋರಾಟದ ಹಿನ್ನೆಲೆಯಲ್ಲಿ ಸರ್ಕಾರದ ಮೇಲೆ ರಾಜಕೀಯ ಒತ್ತಡ ಹೆಚ್ಚಾಗಿದೆ. ಬಿಜೆಪಿ ನಾಯಕರು ರೈತರ ಸಮಸ್ಯೆಯನ್ನು ಎತ್ತಿ ತೋರಿಸುತ್ತಿದ್ದಾರೆ. ನಾಳಿನ ಕ್ಯಾಬಿನೆಟ್ ಸಭೆಯಲ್ಲಿ ಕಬ್ಬು ಬೆಲೆಯ ಬಗ್ಗೆ ನಿರ್ಧಾರ ಆಗಬಹುದು. ಒಂದು ವೇಳೆ ಇದು ವಿಫಲವಾದರೆ, ಗುರ್ಲಾಪೂರದಿಂದ ದೇಶಾದ್ಯಂತ ಹೋರಾಟವು ಉಲ್ಬಣಗೊಳ್ಳಬಹುದು.

# ದೀಪದ ಸಮುದ್ರದಲ್ಲಿ ಮಿಂದ ಕೃಷ್ಣಮಠ ಉಡುಪಿಯಲ್ಲಿ ಲಕ್ಷದೀಪೋತ್ಸವ



**ಉಡುಪಿ**: ಅಪರೂಪದ ಸಂಪ್ರದಾಯಗಳಿಗೆ ಹೆಸರಾದ ಉಡುಪಿ ಶ್ರೀ ಕೃಷ್ಣಮಠವು ಲಕ್ಷದೀಪಗಳ ಜ್ಯೋತಿರ್ಮಯ ಸಮುದ್ರದಲ್ಲಿ ಮಿಂದು, ಭಕ್ತರನ್ನು ಮಂತ್ರಮುಗ್ಧಗೊಳಿಸಿದೆ. ಕಡಗೋಲು ಕೃಷ್ಣನ ಮೊಟ್ಟಮೊದಲ ರಥೋತ್ಸವದ ಸಂದರ್ಭದಲ್ಲಿ ನಡೆದ ಈ ಭವ್ಯ ಲಕ್ಷದೀಪೋತ್ಸವವು ದೇಶ-ವಿದೇಶದಿಂದ ಬಂದ ಲಕ್ಷಾಂತರ ಭಕ್ತರನ್ನು ಆಕರ್ಷಿಸಿದೆ.

ದೇವರ ಸ್ವಾಗತಕ್ಕೆ ಸಜ್ಜಾಗಿದ್ದ ಉಡುಪಿಯ ಅಷ್ಟಮಠಗಳ ರಥಬೀದಿ ಸಾವಿರಾರು ಹಣತೆಗಳ ದೀಪಗಳಿಂದ ಕಂಗೊಳಿಸಿತು. ಕಾರ್ತಿಕ ಮಾಸದ ಈ ಪವಿತ್ರ ಅವಧಿಯಲ್ಲಿ, ಕೃಷ್ಣನಿಗೆ ಹಣತೆಯಲ್ಲಿ ದೀಪ ಬೆಳಗಿ ಭಕ್ತರು ತಮ್ಮ ಭಕ್ತಿ ಭಾವವನ್ನು ವ್ಯಕ್ತಪಡಿಸಿದರು. ಈ ಉತ್ಸವವು ಉತ್ಥಾನ ದ್ವಾದಶಿಯ ದಿನ ಯೋಗ ನಿದ್ರೆಯಿಂದ ಎಚ್ಚೆತ್ತು ರಥಬೀದಿಗೆ ಪಯಣವನ್ನು ಆರಂಭಿಸುವ ಕೃಷ್ಣ ದೇವರನ್ನು ಸ್ವಾಗತಿಸುವ ಸಂಕೇತವಾಗಿದೆ. ದೀಪಗಳ ನಡುವೆ ಕೃಷ್ಣನ ಮೆರವಣಿಗೆ

ಇಳಿಸಂಜೆಯ ವೇಳೆಗೆ, ಭಕ್ತರ ಸಮುದಾಯ ರಥಬೀದಿಯಲ್ಲಿ ಜಮಾಯಿತು. ಭಕ್ತರು ಸಾಲು ಸಾಲಾಗಿ ಸಾವಿರಾರು ದೀಪಗಳನ್ನು ಬೆಳಗಿದರು, ಇಡೀ ಪ್ರದೇಶವನ್ನು ಒಂದು ಮಾಯಿಕವಾದ ಬೆಳಕಿನ ಆವರಣವನ್ನಾಗಿ ಮಾರ್ಪಡಿಸಿದರು. ಈ ಭವ್ಯ ವಾತಾವರಣದ ನಡುವೆ, ಮಧ್ವ ಸರೋವರದಲ್ಲಿ ವಿಶೇಷ ಕ್ಷೀರಾಬ್ಧಿ ಪೂಜೆಯನ್ನು ನಡೆಸಲಾಯಿತು. ಪೂಜೆಯ ನಂತರ, ಕೃಷ್ಣ ದೇವರ ಉತ್ಸವ ಮೂರ್ತಿಯನ್ನು ಮಠದಿಂದ ಹೊರಗೆ ತಂದು ಮಧ್ವ ಸರೋವರಕ್ಕೆ ಕೊಂಡೊಯ್ಯಲಾಯಿತು. ದೀಪಗಳ ಶೋಭಾಮಾನ ಸಾಲುಗಳ ನಡುವೆ ದೇವರ ಮೆರವಣಿಗೆ ಮುಂದುವರಿಯಿತು, ಅದರ ಮುಂಭಾಗದಲ್ಲಿ ಚಂಡೆಗಳ ಪ್ರಭಾವಿ ನಾದವು ವಾತಾವರಣವನ್ನು ಪವಿತ್ರಗೊಳಿಸಿತು.

ಮಠಾಧೀಶರರಿಂದ ಭಕ್ತರವರೆಗೆ ಸಮಗ್ರ ಭಾಗವಹಿಸುವಿಕೆ

ಈ ಬಾರಿಯ ಲಕ್ಷ ದೀಪೋತ್ಸವದಲ್ಲಿ ಪರ್ಯಾಯ ಪುತ್ತಿಗೆ ಶ್ರೀಗಳು ಸೇರಿದಂತೆ ಹಲವಾರು ಮಠಗಳ ಯತಿಗಳು ಭಾಗವಹಿಸಿದರು, ಉತ್ಸವಕ್ಕೆ ಹೆಚ್ಚಿನ ಧಾರ್ಮಿಕ ಮಹತ್ವವನ್ನು ನೀಡಿದರು. ನೂರಾರು ಭಕ್ತರು ಉತ್ಸಾಹದಿಂದ ಸೇರಿ ಎರಡೂ ರಥಗಳನ್ನು ಎಳೆದರು, ತಮ್ಮ ಭಕ್ತಿಯನ್ನು ಪ್ರದರ್ಶಿಸಿದರು. ಸಾವಿರಾರು ಸಂಖ್ಯೆಯಲ್ಲಿ ಕೃಷ್ಣ ಮಠಕ್ಕೆ ಬಂದಿದ್ದ ಭಕ್ತರು ಲಕ್ಷದೀಪೋತ್ಸವದಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಭಕ್ತಿಯಲ್ಲಿ ಲೀನರಾದರು.

ಮುಂದುವರಿಯಲಿರುವ ರಥೋತ್ಸವ

ಒಟ್ಟಾರೆಯಾಗಿ, ಲಕ್ಷದೀಪೋತ್ಸವದೊಂದಿಗೆ ಆರಂಭವಾಗುವ ಕೃಷ್ಣ ದೇವರ ರಥೋತ್ಸವ ಮುಂದಿನ ಮಳೆಗಾಲದವರೆಗೆ ನಡೆಯಲಿದೆ. ಅಷ್ಟಮಠಗಳ ರಥಬೀದಿಯಲ್ಲಿ ಸೇವಾರೂಪದಲ್ಲಿ ನಡೆಯುವ ಈ ಉತ್ಸವದಿಂದ ಪ್ರತಿದಿನ ಹಬ್ಬದ ವಾತಾವರಣವನ್ನು ನಿರ್ಮಿಸಲಿದೆ. ಮಠಾಧೀಶರ ಉಪಸ್ಥಿತಿಯಲ್ಲಿ ವೈಭವದ ನಡುವೆ ನಡೆದ ಕೃಷ್ಣನ ದೇವರ ಮೆರವಣಿಗೆ ಮತ್ತು ರಥಬೀದಿಯ ಲಕ್ಷದೀಪೋತ್ಸವವನ್ನು ಕಂಡು ಭಕ್ತರು ಗಹಗಹಿಸಿದರು ಮತ್ತು ಆನಂದದ ಅಶ್ರುಗಳನ್ನು ಸುರಿಸಿದರು ರಥಬೀದಿಯಲ್ಲಿ ಲಕ್ಷದೀಪೋತ್ಸವ ಕಂಡು ಭಕ್ತರು ಸಂತಸಗೊಂಡರು. “ದೇವರ ದರ್ಶನಕ್ಕೆ ಈ ದೀಪಗಳು ಸಾಕ್ಷಿ” ಎಂದು ಒಬ್ಬ ಭಕ್ತ ಹೇಳಿದರು. ದೂರದಿಂದ ಬಂದ ಭಕ್ತರು ಈ ಮಹೋತ್ಸವದಲ್ಲಿ ಪಾಲ್ಗೊಂಡು ದೇವರ ಕೃಪೆಗೆ ಪಾತ್ರರಾದರು. ಈ ಉತ್ಸವವು ಉಡುಪಿಯ ಆಧ್ಯಾತ್ಮಿಕ ಶಕ್ತಿಯನ್ನು ಪ್ರತಿಬಿಂಬಿಸುತ್ತದೆ.

ಉಡುಪಿಯ ಸಂಪ್ರದಾಯ, ಮಧ್ವಾಚಾರ್ಯರ ಆಶಯ

ಉಡುಪಿಯ ಶ್ರೀ ಕೃಷ್ಣ ಮಠವು ಮಧ್ವಾಚಾರ್ಯರ ಸಂಪ್ರದಾಯಕ್ಕೆ ಹೆಸರುವಾಸಿ. ಈ ಲಕ್ಷದೀಪೋತ್ಸವವು ಭಕ್ತಿ ಮಾರ್ಗದ ಸಂಕೇತ. ಪ್ರತಿ ವರ್ಷವೂ ಈ ಉತ್ಸವವು ಲಕ್ಷಾಂತರ ಭಕ್ತರನ್ನು ಆಕರ್ಷಿಸುತ್ತದೆ. ಈ ಬಾರಿ ಕೂಡ ದೇಶ-ವಿದೇಶದ ಭಕ್ತರು ಆಗಮಿಸಿದ್ದಾರೆ.

ಒಟ್ಟಾರೆಯಾಗಿ, ಲಕ್ಷದೀಪೋತ್ಸವದೊಂದಿಗೆ ಆರಂಭವಾದ ಕೃಷ್ಣ ರಥೋತ್ಸವ ಉಡುಪಿಯನ್ನು ಭಕ್ತಿಮಯ ನಗರಿಯಾಗಿ ಮಾರ್ಪಡಿಸಿದೆ. ಅಷ್ಟಮಠಗಳ ರಥಬೀದಿಯಲ್ಲಿ ದೀಪಗಳ ಸಮುದ್ರ, ಭಕ್ತರ ಸಂತೋಷ, ದೇವರ ಮೆರವಣಿಗೆ ಇದೆಲ್ಲವೂ ಉಡುಪಿಯ ಅಪರೂಪದ ಸಂಪ್ರದಾಯಕ್ಕೆ ಸಾಕ್ಷಿಯಾಗಿದೆ.

**ಸುದ್ದಿ ಹಾಗೂ ಜಾಹಿರಾತುಗಳಿಗಾಗಿ ಸಂಪರ್ಕಿಸಿ:**
**9538786812 / 9880655634**

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.